♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI No.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ Volume 07 | ಸಂಚಿಕೆ Issue 27 | ತನಿವಾರ Saturday | 04–05–2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ನರೇಂದ್ರ ಮೋದಿ ಒಳ್ಳೆಯ ನಾಟಕಕಾರ

ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ವಾಗ್ದಾಳಿ



ಬೆಂಗಳೂರು: ನರೇಂದ್ರ ಮೋದಿ ಒಬ್ಬ ಒಳ್ಳೆಯ ನಾಟಕಕಾರ. ಇವೆಂಟ್ ಮ್ಯಾನೇಜರ್ ಆಗಿದ್ದಾರೆ. ಉತ್ತರಕನ್ನಡ ಲೋಕಸಭಾ ಚುನಾವಣೆಯಲ್ಲಿ ಬದಲಾವಣೆಯ ಗಾಳಿ ಜೋರಾಗಿ ಬೀಸುತ್ತಿದೆ. ಹೊಸ ಬದಲಾವಣೆಗೆ ಉತ್ತಮ ಅವಕಾಶ ಒದಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ವ್ಯಕ್ತಪಡಿಸಿದರು.

ಇಂದು ಕುಮಟಾದಲ್ಲಿ ಆಯೋಜಿಸಲಾಗಿದ್ದ ಪ್ರಜಾಧ್ವನಿ –02 ಲೋಕಸಭಾ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಪಕ್ಷದ ಅಧ್ಯರ್ಥಿ ಅಂಜಲಿ ನಿಂಬಾಳ್ಕರ್ ಅವರ ಪರವಾಗಿ ಮತದಾರರಲ್ಲಿ ಮತ ಯಾಚಿಸಿ ಮಾತನಾಡಿದರು.

ಪ್ರಧಾನಿ ಕುರ್ಚಿಯಲ್ಲಿ ಉಳಿಯಲು ಯೋಗ್ಯತೆ ಇಲ್ಲ: ಬಿಜೆಪಿ ಮಹಿಳೆಯರಿಗೆ ರಕ್ಷಣೆ ಕೊಡುತ್ತದೆ ಎಂದು ಹೇಳುವ ಮೋದಿಯವರ ಮೈತ್ರಿ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಏನು ಮಾಡಿದ್ದಾರೆ ಎಂದು ಜಗಜ್ಜಾಹೀರಾಗಿದೆ. ಇದು ತಿಳಿದಿದ್ದರೂ ಕೂಡ ಹೊಂದಾಣಿಕೆ ಮಾಡಿಕೊಂಡು ಅತ್ಯಾಚಾರ ಮಾಡಿರುವ ಪ್ರಜ್ವಲ್ ರೇವಣ್ಣ ಅವರಿಗೆ ಟಿಕೆಟ್ ಕೊಟ್ಟಿದ್ದೀರಲ್ಲಾ? ಇದೇನಾ ಹೆಣ್ಣು ಮಕ್ಕಳಿಗೆ ರಕ್ಷಣೆ ಕೊಡುವ ರೀತಿ ? ಅತ್ಯಾಚಾರಿಗಳಿಗೆ ರಕ್ಷಣೆ ಕೊಟ್ಟು, ಹೆಣ್ಣು ಮಕ್ಕಳಿಗೆ ಏನು ಸಂದೇಶ ನೀಡಿದ್ದೀರಿ ಎಂದು ಇಡೀ ರಾಜ್ಯದ ಜನ ಕೇಳುತ್ತಿದ್ದಾರೆ ಎಂದರು.

ಮೋದಿ ಬರೀ ಸುಳ್ಳು ಹೇಳುತ್ತಾರೆ. ಯಾವ ಭರವಸೆಗಳನ್ನು ಈಡೇರಿಸುವ ಪ್ರಯತ್ನ ಮಾಡಿಲ್ಲ ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯವಿಲ್ಲದ ಮೇಲೆ ಅವರು ಪ್ರಧಾನಿ ಕುರ್ಚಿಯಲ್ಲಿ ಉಳಿಯಲು ಯೋಗ್ಯತೆ ಇಲ್ಲ ಎನ್ನಬೇಕಾಗುತ್ತದೆ ಎಂದರು.

ಬಾರಿ ಬದಲಾವಣೆ ತೆರಲು ನಿಮಗೆ ಅವಕಾಶ: ಹತ್ತು ವರ್ಷಗಳ ಕಾಲ ನರೇಂದ್ರ ಮೋದಿ ನೇತೃತ್ವದ ಸರ್ಕಾರ ದೇಶದ ಬಡವರಿಗೆ ಶಕ್ತಿ ತುಂಬುವ ಕೆಲಸವನ್ನು ಮಾಡಲಿಲ್ಲ. ಅವರ ಕಪ್ಪ ಸುಖ ಏನೆಂದು ಕೇಳಲಿಲ್ಲ. ಕರ್ನಾಟಕದಲ್ಲಿ ಹಾಗೂ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಇದ್ದರೆ ಡಬಲ್ ಇಂಜಿನ್ ಸರ್ಕಾರವಾಗುತ್ತದೆ ಎಂದಿದ್ದರು. ಬಿಜೆಪಿ ಸರ್ಕಾರ 3 ವರ್ಷ ಹತ್ತು ತಿಂಗಳು ಲೂಟಿ ಮಾಡಿದ್ದು ಬಿಟ್ಟರೆ ಬಡವರು, ರೈತರು, ಹಿಂದುಳಿದವರು, ಅಲ್ಪಸಂಖ್ಯಾತರ ಪರವಾಗಿ ಏನೂ ಕೆಲಸ ಮಾಡಲಿಲ್ಲ ಎಂದರು.

ನಮ್ಮ ಪಕ್ಷದ ಅಭ್ಯರ್ಥಿಗೆ ಈ ಬಾರಿ ಜನತೆ ಆಶೀರ್ವಾದ ಮಾಡುತ್ತಾರೆ ಎನ್ನುವ ವಿಶ್ವಾಸ ನನಗಿದೆ. ಹಿಂದೆಲ್ಲಾ ಈ ಕ್ಷೇತ್ರದಿಂದ ಬಿಜೆಪಿಯವನ್ನು ಗೆಲ್ಲಿಸಿದ್ದೀರಿ. ಒಮ್ಮೆ ಮಾರ್ಗರೇಟ್ ಆಳ್ವ ಅವರು ಸಂಸದರಾಗಿದ್ದರು. ಈ ಬಾರಿ ಬದಲಾವಣೆ ತೆರೆಯಲು ನಿಮಗೆ ಒಳ್ಳೆಯ ಅವಕಾಶ ದೊರೆತಿದೆ. ಈ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಬದಲಾವಣೆಗೆ ಕಾರಣರಾಗಿ ಎಂದರು.

40% ಸರ್ಕಾರದ ಆರೋಪಕ್ಕೆ ಮೋದಿ ಪ್ರತಿಕ್ರಿಯೆ ನೀಡಲಿಲ್ಲ: ಕರ್ನಾಟಕದಲ್ಲಿ ಲೂಟಿ ಹೊಡೆಯುವ ಗ್ಯಾಂಗ್ ಇದೆ ಎಂದು ನರೇಂದ್ರ ಮೋದಿ ಹೇಳುತ್ತಾರೆ. ಬಿಜೆಪಿ ಸರ್ಕಾರವನ್ನು ಗುತ್ತಿಗೆದಾರರ ಸಂಘ 40% ಸರ್ಕಾರ ಎಂದು ಆರೋಪಿಸಿದಾಗ ಮೋದಿಯವರು ಪ್ರತಿಕ್ರಿಯೆ ನೀಡಲಿಲ್ಲ. 40% ಸರ್ಕಾರ ಎಂದು ಜನ ಹೇಳುವಾಗಲೂ ಸುಮ್ಮನೆ ಸಹಿಸಿಕೊಂಡು ಇದ್ದಿರಿ. ಅದರ ಅರ್ಥ ಭ್ರಷ್ಟಾಚಾರವನ್ನು ಸಹಿಸಿಕೊಂಡಿರಿ. ಭ್ರಷ್ಟರನ್ನು ಸರ್ಕಾರಕ್ಕೆ ಸೇರ್ಪಡೆ ಗೊಳಿಸುತ್ತಿದ್ದೀರಿ ಎಂದು ವ್ಯಂಗ್ಯವಾಡಿದರು.

ಬಡವರ ಬದುಕು ದುಸ್ತರ ಮಾಡಿದರು: ರೈತರ ಆದಾಯ ದುಪ್ಪಟ್ಟು ಮಾಡುವುದಾಗಿ ಹೇಳಿದರು. ಅಗತ್ಯ ವಸ್ತುಗಳ ಬೆಲೆ ಕಡಿಮೆ ಮಾಡುವುದಾಗಿ ಹೇಳಿದರು. ಯಾವುದೂ ಕಡಿಮೆ ಆಗಲಿಲ್ಲ. ರೈತರ, ಬಡವರ ಜೀವನ ಅತ್ಯಂತ ಸುಲಭ ಮಾಡುತ್ತೇನೆ ಎಂದರು. ಇಲ್ಲಿಯವರೆಗೆ ಅದನ್ನು ಮಾಡಲಿಲ್ಲ ಎಂದರು. ಜನರನ್ನು ಭ್ರಮಾಲೋಕದಲ್ಲಿ ತೇಲಾಡುವಂತೆ ಮಾಡಿ ದೇಶದಲ್ಲಿ ಯಾವ ಭರವಸೆಯನ್ನೂ ಈಡೇರಿಸಲಿಲ್ಲ. ಭಾವನಾತ್ಮಕ ವಿಚಾರಗಳನ್ನು ಪ್ರಸ್ತಾಪ ಮಾಡಿ, ಭಾವನೆಗಳನ್ನು ಕೆರಳಿಸಿದರು. ಜನರ ಕಷ್ಟಗಳಿಗೆ ಪರಿಹಾರ ಕೊಡಲಿಲ್ಲ. ಹಾಗಾಗಿ ಬಡವರ ಬದುಕು ದುಸ್ತರವಾಯಿತು ಎಂದು ಹೇಳಿದರು.

ಸುಳ್ಳು ಹೇಳಿ ಕಾಂಗ್ರೆಸ್ ಎಂದೂ ಮತ ಕೇಳುವುದಿಲ್ಲ: ರಾಜ್ಯದಲ್ಲಿ ಜನರ ಜೀವನ ಸುಧಾರಣೆ ಮಾಡುವ ಸಲುವಾಗಿ ಐದು ಗ್ಯಾರಂಟಿಗಳನ್ನು ಜಾರಿ ಮಾಡಲಾಯಿತು. ಶಕ್ತಿ ಯೋಜನೆಯಡಿ 200 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ರಾಜ್ಯದ ಜನ ಪ್ರಶಂಸಿದ್ದಾರೆ. ರಾಜ್ಯದ ಜನರಿಗೆ ಅಕ್ಕಿ ಪೂರೈಸಲು ಕೇಂದ್ರ ಒಪ್ಪದೇ, ರಾಜ್ಯದ ಬಡವರಿಗೆ ಅನ್ಯಾಯ ಮಾಡಿದರು. ಆದ್ದರಿಂದ ರಾಜ್ಯ ಸರ್ಕಾರ 5 ಕೆಜಿ ಅಕ್ಕಿಯ ಬದಲು 170 ರೂ. ನೀಡುತ್ತಿದೆ.

1.60 ಕೋಟಿ ಕುಟುಂಬಗಳಿಗೆ ಗೃಹ ಜ್ಯೋತಿ ಯೋಜನೆಯಿಂದ ಲಾಭವಾಗಿದೆ. 1.20 ಕೋಟಿ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆ ಜಾರಿ ಮಾಡಲಾಗಿದೆ. ನಿರುದ್ಯೋಗಿ ಯುವಜನತೆಗೆ ಯುವನಿಧಿ ಯೋಜನೆಯನ್ನು ನೀಡಲಾಗಿದೆ. ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಸುಳ್ಳು ಹೇಳಿ ಮತ ಕೇಳುವ ಕೆಲಸವನ್ನು ಕಾಂಗ್ರೆಸ್ ಎಂದೂ ಮಾಡಿಲ್ಲ. ನುಡಿದಂತೆ ನಡೆಯುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕಾಗಿ ಜನರಿಗೆ ಕರೆ ನೀಡಿದರು.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಮಾಜಿ ರಾಜ್ಯಪಾಲರಾದ ಮಾರ್ಗರೇಟ್ ಆಳ್ವ, ಮಾಜಿ ಸಚಿವ ಆರ್.ವಿ. ದೇಶಪಾಂಡೆ, ಸಚಿವ ಮಾಂಕಾಳ ವೈದ್ಯ, ರಮಾನಾಥ್ ರೈ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ, ಶಾಸಕ ಭೀಮಣ್ಣ ನಾಯಕ್, ಸತೀಶ್, ಮಾಜಿ ಶಾಸಕರು, ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಮದ್ದೂರು–ಮಳವಳ್ಳಿ ರಸ್ತೆ ನಿರ್ವಹಣೆ ಕುರಿತು ತಮ್ಮಣ್ಣ ಆಕ್ಷೇಪ

ಭಾರತೀನಗರ: ಮದ್ದೂರು–ಮಳ ವಳ್ಳಿ, ಮದ್ದೂರು–ತುಮಕೂರು ಮಾರ್ಗದ ರಾಜ್ಯ ಹೆದ್ದಾರಿಯ ರಸ್ತೆಯನ್ನು ಮಧ್ಯೆ ಮಧ್ಯೆ ಬಿಟ್ಟು ಪ್ಯಾಚ್ ಕೆಲಸ ಮಾಡುತ್ತಿರುವುದು ಸರಿಯಲ್ಲ ಎಂದು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಅವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

2016–17ನೇ ಸಾಲಿನಲ್ಲಿ ಅಂದಿನ ಲೋಕೋಪಯೋಗಿ ಸಚಿವ ಎಚ್.ಡಿ. ರೇವಣ್ಣ ಅವರ ಅವಧಿಯಲ್ಲಿ ಸುಮಾರು 500 ಕೋಟಿ ರೂ. ವೆಚ್ಚದಲ್ಲಿ ಮಳವಳ್ಳಿ, ಮದ್ದೂರು, ಶಿವಮೊರ, ಕುಣಿಗಲ್, ತುಮ ಕೂರು, ಕೊಟಗೆರೆ, ಪಾವಗಡ, ಆಂಧ್ರ ಪ್ರದೇಶದ ಗಡಿವರೆಗೆ ರಾಜ್ಯ ಹೆದ್ದಾರಿ ಯನ್ನು ಮಾಡಲಾಗಿತ್ತು. ಸಂಬಂಧಿಸಿದ ಗುತ್ತಿಗೆದಾರರೇ 6 ವರ್ಷ ನಿರ್ವಹಣೆ ಮಾಡಬೇಕೆಂದು ಸೂಚಿಸಲಾಗಿತ್ತು.

ಒಂದು ವೇಳೆ ರಸ್ತೆಯು ಕಿತ್ತು ಹೋದರೆ ಅದನ್ನು ಸರಿಪಡಿಸಬೇಕೆಂದು ಸಂಬಂಧಿಸಿದ ಗುತ್ತಿಗೆದಾರರಿಗೇ ತಿಳಿಸಲಾಗಿತ್ತು. ಲೋಕಸಭೆ ಚುನಾವಣೆಗೂ ಮುನ್ನ ಮದ್ದೂರು ವ್ಯಾಪ್ತಿಯಲ್ಲಿ ಸುಮಾರು 3 ಕಿ.ಮೀ. ರಸ್ತೆಗೆ ಪ್ಯಾಚ್ ಕೆಲಸ ಮಾಡಲಾ ಗಿತ್ತು. ಈಗ ಚುನಾವಣೆ ಅಧಿಸೂಚನೆ ಹೊರಡಿಸಿದ ನಂತರ ಕೆಲಸ ನಿಲ್ಲಿಸಲಾ ಗಿತ್ತು. ಪ್ರಸ್ತುತ ರಸ್ತೆ ನಿರ್ವಹಣೆ ಕೆಲಸ ನಡೆಯುತ್ತಿದ್ದು, ಕ್ರಮವಾಗಿ ಕೆಲಸ ಮಾಡದೆ, ಮದ್ದೂರು, ಭಾರತೀನಗರ, ಕೆಸ್ತೂರು ಇಂತಹ ಪ್ರಮುಖ ಪಟ್ಟಣದಲ್ಲಿ ಮಧ್ಯೆ ಮಧ್ಯೆ ಕೆಲಸ ಮಾಡುತ್ತಿರುವುದು ಸರಿಯಲ್ಲ. ಸಂಪೂರ್ಣವಾಗಿ ನಿರ್ವಹಣೆ ಮಾಡಬೇ ಕೆಂದು ಆಗ್ರಹಿಸಿದ್ದಾರೆ.

ನನ್ನ ಅವಧಿಯಲ್ಲಿ ಗುತ್ತಿಗೆದಾರರಿಗೆ ಟೆಂಡರ್ ನೀಡಿದಾಗ ಸರಿಯಾಗಿ ನಿರ್ವಹಣೆ ಮಾಡಬೇಕೆಂದು ತಿಳಿಸಲಾಗಿತ್ತು. ಆದರೆ, ಇಂದು ಮಧ್ಯೆ ಮಧ್ಯೆ ಕೆಲಸ ಮಾಡುವಂತೆ ಯಾರು ಹೇಳಿದ್ದಾರೋ, ಇದರ ಹಿಂದೆ ಯಾರು ಇದ್ದಾರೆ ಎಂಬುದು ಗೊತ್ತಿಲ್ಲ. ಈ ಸಂಬಂಧವಾಗಿ ರಾಜ್ಯ ಹೆದ್ದಾರಿ ಪ್ರಾಧಿಕಾರ, ಸಂಬಂಧಿಸಿದ ಇಂಜಿನಿಯರ್ ಅವರಿಗೆ ಪತ್ರ ಬರೆದಿದ್ದೇನೆ ಎಂದು ತಿಳಿಸಿದರು.

ಎಚ್.ಡಿ.ರೇವಣ್ಣ ವಿರುದ್ಧ ಮಹಿಳೆ ಅಪಹರಣ ಪ್ರಕರಣ ದಾಖಲು



ಮೈಸೂರು: ಲೈಂಗಿಕ ದೌರ್ಜನ್ಯದ ಪ್ರಕರಣ ಎದುರಿಸುತ್ತಿರುವ ಜೆಡಿಎಸ್ ಶಾಸಕ ಎಚ್.ಡಿ. ರೇವಣ್ಣ ಅವರಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ.

ಮನೆಯಲ್ಲಿ ಕೆಲಸಕ್ಕಿದ್ದ ಮಹಿಳೆಯನ್ನು ಅಪಹರಿಸಿದ ಆರೋಪದ ಮೇಲೆ ಮೈಸೂರು ಜಿಲ್ಲೆಯ ಕೆ.ಆರ್.ನಗರ ಪೊಲೀಸ್ ಠಾಣೆಯಲ್ಲಿ ಗುರುವಾರ ಪ್ರಕರಣ ದಾಖಲಾಗಿದೆ.

ಈ ಪ್ರಕರಣದಲ್ಲೂ ಎಚ್.ಡಿ. ರೇವಣ್ಣ ಮೊದಲ ಆರೋಪಿ (ಎ1) ಹಾಗೂ ಕೆ.ಆರ್.ನಗರ ತಾಲ್ಲೂಕಿನ ಹೆಬ್ಬಾಳು ಕೊಪ್ಪಲಿನ ಸತೀಶ್ ಬಾಬಣ್ಣ ಎರಡನೇ ಆರೋಪಿಯಾಗಿದ್ದಾರೆ.

ರಾಜು ದೂರಿನಲ್ಲೇನಿದೆ?: ರೇವಣ್ಣ ಮನೆಯಲ್ಲಿ ಕೆಲಸ ಮಾಡುತ್ತಿದ್ದ ನನ್ನ ತಾಯಿಯನ್ನು ಅಪಹರಿಸಿದ್ದಾರೆ ಎಂದು ಅವರ ಪುತ್ರ ರಾಜು ದೂರು ನೀಡಿದ್ದು, ಎಫ್ಐಆರ್ ದಾಖಲಾಗಿದೆ.

ನನ್ನ ತಾಯಿ ಆರು ವರ್ಷದಿಂದ ಹೊಳೆನರಸೀಪುರದ ಚೆನ್ನಾಂಬಿಕ ಥಿಯೇಟರ್ ಬಳಿ ಇರುವ ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡುತ್ತಿದ್ದರು. ಕಳೆದ 3 ವರ್ಷದಿಂದ ಅಲ್ಲಿ ಕೆಲಸ ಬಿಟ್ಟಿದ್ದು, ಊರಿನಲ್ಲಿ ಕೂಲಿ ಮಾಡುತ್ತಿದ್ದರು. ಲೋಕಸಭಾ ಚುನಾವಣೆ ಸಮಯದಲ್ಲಿ ಭವಾನಿ ಅವರು ಮತ್ತೆ ಕೆಲಸಕ್ಕೆ ಕರೆದಿದ್ದಾರೆಂದು ಹೇಳಿ ಹೆಬ್ಬಾಳಕೊಪ್ಪಲಿನ ಸತೀಶ್ ಬಾಬಣ್ಣ ನನ್ನ ತಾಯಿಯನ್ನು ಕರೆದುಕೊಂಡು ಹೋಗಿದ್ದರು' ಎಂದು ತಿಳಿಸಿದ್ದಾರೆ.

ಚುನಾವಣೆಯ ದಿನ ತಾಯಿಯನ್ನು ಮತ್ತೆ ಮನೆಗೆ ಕರೆದುಕೊಂಡು ಬಂದು ಬಿಟ್ಟಿದ್ದರು. ನಂತರ ಪ.ಪಂ.ರಂದು ರಾತ್ರಿ ಪಂಚಾಯಿತಿ ವ್ಯಾಪ್ತಿಯಲ್ಲಿ ರೈತರು ಬೆಳೆದಿದ್ದ ನೂರಾರು ಎಕರೆ ಬಾಳೆ ಹಾಗೂ ಪಪಾಯ ನೆಲಕ್ಕುರುಳಿದೆ.

ಈ ಸಂಬಂಧ ರೈತ ನಾಗರಾಜು ಮಾತನಾಡಿ ಬರಬಾರದು ಇರುವ ನೀರಿನಲ್ಲಿ ಉತ್ತಮ ಬೆಳೆ ಬೆಳೆಯಲಾಗಿತ್ತು. ಕೈಗೆ ಬಂದ ತುತ್ತು ಬಾಯಿಗೆ ಬಾರದ ಹಾಗೆ ಆಗಿದೆ. ಸ್ಥಳಕ್ಕೆ ಅಧಿಕಾರಿಗಳು ಬರುವ ವೇಳೆ ರೈತರು ಪರಿಶೀಲನೆ ನಡೆಸುವ ವೇಳೆ ನಮಗೆ ವಿಷವನ್ನು ಆದರೂ ಕೊಟ್ಟು ಬಿಡಲಿ ಆದರೆ ಇವರು ಕೊಡುವ 2,3 ಸಾವಿರ ಪರಿಹಾರದ ಹಣ ಬೇಡ ಎಂದು ತಮ್ಮ ಆಳಲನ್ನು ತೋಡಿಕೊಂಡಿದ್ದಾರೆ.

ರಸ್ತೆಯ ಮೇಲೆ ಹರಿದ ಚರಂಡಿ ನೀರು: ಹನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ 12,13ನೇ ವಾರ್ಡಿನ ಕುರುಬರ ಹಾಗೂ ಉಪ್ಪಾರ ಸಮಾಜದವರು ಇರುವ ಬಡಾವಣೆಗಳಲ್ಲಿ ಸಮರ್ಪಕವಾಗಿ ಚರಂಡಿಯಲ್ಲಿರುವ ಕಸ ಕಡ್ಡಿಗಳನ್ನು ತೆರವು ಮಾಡದೆ ಇರುವುದರಿಂದ ಶುಕ್ರವಾರ ಬಿದ್ದ ಮಳೆಗೆ ಚರಂಡಿಯಲ್ಲಿದ್ದ ಕಸ ಕಡ್ಡಿಗಳು ಮಳೆಯ ನೀರನ್ನು ತಡೆದುಕೊಂಡ ಪರಿಣಾಮ ರಸ್ತೆಯ ಮೇಲೆ ಹೊಳೆಯಂತೆ ಹರಿದಿದೆ. ಇದನ್ನು ಬಡಾವಣೆಯ ನಿವಾಸಿಗಳು ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಹರಿಬಿಟ್ಟು ಪಟ್ಟಣ ಪಂಚಾಯಿತಿ ಆಡಳಿತ ವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಘಟನೆಯ ಸಂಬಂಧ ಬಡಾವಣೆಯ ನಿವಾಸಿ ಸುರೇಶ್ ಮಾತನಾಡಿ ಕಳೆದ ಒಂದು ವರ್ಷಗಳಿಂದ ಚರಂಡಿಯಲ್ಲಿರುವ ಕಲ್ಲುಗಳನ್ನು ತೆಗೆಯದೆ ಇರುವ ಪರಿಣಾಮ ಈ ಸ್ಥಿತಿ ಬಂದಿದೆ. ಬಡಾವಣೆಯ ಹಲವು ಮನೆಗಳಿಗೆ ಕೊಳಚೆ ನೀರು ನುಗ್ಗಿ ತೀವ್ರ ತೊಂದರೆ ಅನುಭವಿಸಿದ್ದಾರೆ ಎಂದು ಪತ್ರಿಕೆಗೆ ಮಾಹಿತಿ ನೀಡಿದರು.

ಒಟ್ಟಾರೆ ಹನೂರು ಶಾಂತಳಿನ ವಿವಿಧ ಗ್ರಾಮಗಳಲ್ಲಿ ನೂರಾರು ಎಕರೆ ಬಾಳೆ, ಪಪಾಯ ಬೆಳೆ ನೆಲಕ್ಕುರುಳಿದರೆ ಹತ್ತಕ್ಕೂ ಹೆಚ್ಚು ಮನೆಗಳ ಮೇಲ್ಚಾವಣಿ ಹಾರಿ ಹೋಗಿದ್ದು ಅಪಾರ ಪ್ರಮಾಣದ ನಷ್ಟ ಉಂಟಾಗಿದೆ. ಸ್ಥಳಕ್ಕೆ ಹಿರಿಯ ಅಧಿಕಾರಿಗಳು ಭೇಟಿ ನೀಡಿ ನೊಂದವರಿಗೆ ಸೂಕ್ತ ಪರಿಹಾರ ಕೊಡಿಸುವಂತೆ ರೈತರು ಒತ್ತಾಯಿಸಿದ್ದಾರೆ.

ಚಾಮರಾಜನಗರ: ಬಿರುಗಾಳಿಮಳೆಗೆ ಅಪಾರ ಪ್ರಮಾಣದ ಬೆಳೆ, ಮನೆ ಹಾನಿ: ಸಿಡಿಲಿಗೆ ಮೂರು ಎಮ್ಮೆ ಬಲಿ


ಚಾಮರಾಜನಗರ: ಬಿಸಿಲಿನ ತಾಪ ಮಾನಕ್ಕೆ ತತ್ತರಿಸಿದ್ದ ಜನತೆಗೆ ಒಂದೆಡೆ ಮಳೆ ತಂಪೆರದರೆ ಇನ್ನೊಂದೆಡೆ ರೈತರಿಗೆ ಬರ ಸಿಡಿಲು ಬಡಿದಂತಾಗಿ ಅಪಾರ ಪ್ರಮಾಣದ ಬೆಳೆ, ಮನೆಯ ಮೇಲ್ಚಾವಣಿಗಳು ಗಾಳಿಗೆ ಹಾರಿ ಹೋಗಿ ಲಕ್ಷಾಂತರ ರೂಪಾಯಿ ನಷ್ಟ ಉಂಟಾಗಿರುವ ಘಟನೆ ಶುಕ್ರವಾರ ಜರುಗಿದೆ.

ಶುಕ್ರವಾರ ಮಧ್ಯಾಹ್ನ ಸುಮಾರು ಮೂರು ಗಂಟೆಯ ಸಮಯದಲ್ಲಿ ಹನೂರು ತಾಲೂಕಿನ ಕಣ್ಣೂರು ಲೊಕ್ಕನ ಹಳ್ಳ, ಒಡೆಯರಪಾಳ್ಯ, ಶಾಗ್ಯ, ಯರಂಬಾಡಿ, ಜಲ್ಲಿಪಾಳ್ಯ ಗ್ರಾಮಗಳಲ್ಲಿ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಉತ್ತಮ ಮಳೆಯಾಗಿದೆ. ಮಳೆಯಾಗಿರುವುದು ಕೆಲವರು ರೈತರಿಗೆ ಸಂತಸ ತಂದಿದ್ದರೆ. ಇನ್ನು ಕೆಲವು ರೈತರಿಗೆ ನಷ್ಟವನ್ನುಂಟು ಮಾಡಿದೆ.

ಸಿಡಿಲಿಗೆ ಮೂರು ಎಮ್ಮೆ ಬಲಿ: ಶುಕ್ರವಾರ ಮಧ್ಯಾಹ್ನ ಬಿದ್ದ ಗುಡುಗು ಸಹಿತ ಮಳೆಗೆ ಹನೂರು ತಾಲೂಕಿನ ಶಾಗ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೀರೂಟ್ ಗ್ರಾಮದ ರತ್ನಮ್ಮ ಎಂಬವರಿಗೆ ಸೇರಿದ ಸುಮಾರು ಒಂದು ಲಕ್ಷದ ಇಪ್ಪತ್ತು ಸಾವಿರ ಬೆಲೆಬಾಳುವ 3 ಎಮ್ಮೆಗಳು ಸಿಡಿಲಿಗೆ ಮೃತಪಟ್ಟಿದೆ.

ಹಲವು ಮನೆಗಳಿಗೆ ಹಾನಿ: ಬಿರುಗಾಳಿ ಸಹಿತ ಮಳೆಗೆ ಪುಷ್ಪಾಪುರ ಗ್ರಾಮದ ಮುತ್ತು ಮಾದ ಶೆಟ್ಟಿ ಎಂಬುವರಿಗೆ ಸೇರಿದ ಮನೆಯ ಮೇಲ್ಚಾವಣಿ ಗಾಳಿಗೆ ತೂರಿದೆ.





ಇದರಿಂದ ಸುಮಾರು 2 ಲಕ್ಷಕ್ಕೂ ಹೆಚ್ಚು ನಷ್ಟ ಉಂಟಾಗಿದೆ. ಇನ್ನು ಇದೇ ಗ್ರಾಮದ ವೆಂಕಟರಾಜು ಎಂಬುವರಿಗೆ ಸೇರಿದ ಮನೆಗೆ ಗೊಬ್ಬಳಿ ಮರ ಬಿದ್ದು ಅಪಾರ ಪ್ರಮಾಣದ ಸಾಮಗ್ರಿಗಳು ನಷ್ಟವಾಗಿದೆ. ಮರಿಯಮಂಗಲ ಗ್ರಾಮದ ಹತ್ತಕ್ಕೂ ಹೆಚ್ಚು ಮನೆಗಳ ಮೇಲ್ಚಾವಣಿ ಹಾರಿ ಹೋಗಿರುವುದಲ್ಲದೆ ಅಪಾರ ಪ್ರಮಾಣದ ನಷ್ಟ ಉಂಟಾಗಿದೆ.

ಅಪಾರ ಪ್ರಮಾಣದ ಬೆಳೆ ನಷ್ಟ: ಶುಕ್ರವಾರ ಮಧ್ಯಾಹ್ನ ಬಿದ್ದ ಗಾಳಿ ಸಹಿತ ಮಳೆಗೆ ಮಿಣ್ಯಂ, ಹೂಗ್ಯಂ. ಶಾಗ್ಯ ಗ್ರಾಮ



ಪತ್ರಿಕೆಗೆ ಮಾಹಿತಿ ನೀಡಿದರು.

ಒಟ್ಟಾರೆ ಹನೂರು ತಾಲೂಕಿನ ವಿವಿಧ ಗ್ರಾಮಗಳಲ್ಲಿ ನೂರಾರು ಎಕರೆ ಬಾಳೆ, ಪಪಾಯ ಬೆಳೆ ನೆಲಕ್ಕುರುಳಿದರೆ ಹತ್ತಕ್ಕೂ ಹೆಚ್ಚು ಮನೆಗಳ ಮೇಲ್ಚಾವಣಿ ಹಾರಿ ಹೋಗಿದ್ದು ಅಪಾರ ಪ್ರಮಾಣದ ನಷ್ಟ ಉಂಟಾಗಿದೆ. ಸ್ಥಳಕ್ಕೆ ಹಿರಿಯ ಅಧಿಕಾರಿಗಳು ಭೇಟಿ ನೀಡಿ ನೊಂದವರಿಗೆ ಸೂಕ್ತ ಪರಿಹಾರ ಕೊಡಿಸುವಂತೆ ರೈತರು ಒತ್ತಾಯಿಸಿದ್ದಾರೆ.

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 04-05-2024

ಮಂಡ್ಯ

ಅಪಘಾತದಲ್ಲಿ ಮೃತಪಟ್ಟ ಕುಟುಂಬಕ್ಕೆ ಮಲ್ಲಿಕಾರ್ಜುನ್ ಆರ್ಥಿಕ ನೆರವು

ಕೆ.ಆರ್.ಪೇಟೆ: ಅಪಘಾತದಲ್ಲಿ ಮೃತಪಟ್ಟ ಕುಟುಂಬಕ್ಕೆ ಆರ್‌ಟಿಒ ಸಂಘದ ರಾಜ್ಯಾಧ್ಯಕ್ಷರಾದ ಮಲ್ಲಿಕಾರ್ಜುನ್ ಸಾಂತ್ವನ ಹೇಳಿ ಆತ್ಮಸ್ಥೈರ್ಯ ತುಂಬಿ ಆರ್ಥಿಕ ಸಹಾಯ ಮಾಡಿದ ಮಾನವೀಯತೆ ಮೆರೆದರು.

ತಾಲ್ಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಸಾರಂಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಹಾರನಹಳ್ಳಿ ಗ್ರಾಮದ ಗ್ರಾಮ ಪಂಚಾಯತಿ ಸದಸ್ಯರಾದ ರವಿಯವರ ಸುಪುತ್ರ ಅಪ್ಪು ಮತ್ತು ಅದೇ ಗ್ರಾಮದ ಕೃಷ್ಣಯ್ಯ ಮತ್ತು ಮೀನಾಕ್ಷಮ್ಮ ದಂಪತಿಗಳ ಮಗ ಅಣ್ಣಪ್ಪ(22) ಎಂಬುವವರು ಮೈಸೂರಿನಲ್ಲಿ ಸಂಬಂಧಿಕರ ಮದುವೆ ಎಂದು ಹೋಗುತ್ತಿದ್ದ ಸಂದರ್ಭದಲ್ಲಿ ಚಿನಕುರಳಿಯ ಬಳಿ ಅಪಘಾತ ಸಂಭವಿಸಿ ಸ್ಥಳದಲ್ಲೇ ಅಣ್ಣಪ್ಪ(22) ಎಂಬುವರು ಸಾವನ್ನಪ್ಪಿದ್ದರು. ಅಪ್ಪು ಎಂಬುವರಿಗೆ ತೀವ್ರ ಸ್ವರೂಪದ ಗಾಯಗೊಂಡು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅಂಗವಾಗಿ ಸಮಾಜ ಸೇವಕ ಆರ್‌ಟಿಒ



ಸಂಘದ ರಾಜ್ಯಾಧ್ಯಕ್ಷರಾದ ಮಲ್ಲಿಕಾರ್ಜುನ್ ಅವರು ಕುಟುಂಬಸ್ಥರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿ ಆತ್ಮಸ್ಥೈರ್ಯ ತುಂಬಿ ಆರ್ಥಿಕ ಸಹಾಯ ಮಾಡಿದ ಮಾನವೀಯತೆ ಮೆರೆದರು.

ಬಿಸಿ ತಾಪಮಾನದ ಹಿನ್ನೆಲೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ: ಡಾ.ಕುಮಾರ



ಮಂಡ್ಯ: ಜಿಲ್ಲೆಯಲ್ಲಿ ಬಿಸಿಲಿನ ತೀವ್ರತೆ ಹೆಚ್ಚಿದ್ದು ತಾಪಮಾನದಲ್ಲಿ ಏರಿಕೆ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ವಿಪಸಬೇಕಿರುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ವೀಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲಾ ವಿಪತ್ತು ಪ್ರಾಧಿಕಾರ ಸಭೆ ನಡೆಸಿ ಮಾತನಾಡಿದರು.

ಜಿಲ್ಲೆಯಲ್ಲಿ ತೀವ್ರ ಶಾಖದ ಅಲೆ / ಅತಿಯಾದ ಉಷ್ಣಾಂಶದಿಂದಾಗಿ ನಾನಾ ರೀತಿಯ ಅನಾರೋಗ್ಯ ಪರಿಸ್ಥಿತಿಗಳು ಸಂಭವಿಸುವ ಸಾಧ್ಯತೆ ಇದ್ದು, ಸಾರ್ವಜನಿಕ ಆರೋಗ್ಯ ಹಿತದೃಷ್ಟಿಯಿಂದ ಅತಿಯಾದ ಉಷ್ಣಾಂಶದಿಂದ ಸಂಭವಿಸಬಹುದಾದ ಅನಾರೋಗ್ಯ ಪರಿಸ್ಥಿತಿಗಳನ್ನು ತಡೆಗಟ್ಟುವ ಏಕೆಯ ನಿಟ್ಟಿನಲ್ಲಿ ಸಾರ್ವಜನಿಕರು ಆರೋಗ್ಯ ಸಂರಕ್ಷಣಾ ಸಲಹೆಗಳನ್ನು ಪಾಲಿಸಬೇಕು ಎಂದರು.

ಹೆಚ್ಚು ನೀರು ಕುಡಿಯುವುದು: ಬಾಯಾರಿಕೆ ಇಲ್ಲದಿದ್ದರೂ ಸಹ ಸಾಕಷ್ಟು ಪ್ರಮಾಣದಲ್ಲಿ ಆಗಾಗ್ಗೆ ನೀರನ್ನು ಕುಡಿಯಬೇಕು. ಬಾಯಾರಿಕೆಯು ನಿರ್ಜಲೀಕರಣದ ಪ್ರಮುಖ ಲಕ್ಷಣವಾಗಿದೆ. ಪ್ರಯಾಣ ಮಾಡುವ ಸಂದರ್ಭದಲ್ಲೂ ಕುಡಿಯಲು ನೀರನ್ನು ಜೊತೆಗೆ ತೆಗೆದುಕೊಂಡು ಹೋಗಬೇಕು. ಪ್ರವಜಿಲೀಕರಣ ದ್ರಾವಣ ಹಾಗೂ ಮನೆಯಲ್ಲಿಯೇ ಸಿದ್ಧಪಡಿಸಿದ ಲಿಂಬು ಶರಬತ್ತು, ಮಜ್ಜಿಗೆ, ಲಸ್ಸಿ, ಹಣ್ಣಿನ ಜ್ಯೂಸ್‌ಗಳನ್ನು ಸೇವಿಸಬೇಕು. ಈ ಋತು ವಿನಲ್ಲಿ ಸಿಗುವ ಹೆಚ್ಚಿನ ನೀರಿನ ಅಂಶವನ್ನು ಹೊಂದಿರುವ ಹಣ್ಣು ತರಕಾರಿಗಳಾದ ಕಲ್ಲಂಗಡಿ, ಕರಬೂಜ, ಮೂಸಂಬಿ, ದ್ರಾಕ್ಷಿ, ಅನಾನಸ್, ಸೌತೆಕಾಯಿ ಹಾಗೂ ಸ್ಥಳೀಯವಾಗಿ ಸಿಗುವ ಹಣ್ಣು ತರಕಾರಿಗಳನ್ನು ಸೇವಿಸಬೇಕು. ಎಳನೀರನ್ನು ಸೇವಿಸಬೇಕು ಎಂದರು.

ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನವು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಸಾರ್ವಜನಿಕ ಸ್ಥಳಗಳಾದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣಗಳಲ್ಲಿ ಸಾರ್ವಜನಿಕರಿಗಾಗಿ ಕಲ್ಪಿಸಿರುವ ನೀರಿನ ವ್ಯವಸ್ಥೆ ಯ ಕಾರ್ಯನಿರ್ವಹಣೆಯನ್ನು ಖಾತ್ರಿ ಪಡಿಸಿಕೊಳ್ಳಲು ಎಂದರು.

ಬಿಸಿಲಿನ ಶಾಖದಿಂದ ಮಕ್ಕಳಲ್ಲೂ ಸಾಕಷ್ಟು ಆರೋಗ್ಯ ಸಮಸ್ಯೆಗಳು ಉಂಟಾಗುತ್ತಿದ್ದೂ, ಮೂರ್ಛೆ ಹೋಗುವುದು, ಸ್ನಾಯು ಸೆಳೆತ, ರೋಗ ಗ್ರಸ್ತವಾಗುವಿಕೆ, ಸಿಡುಕುತನ, ತಲೆ ನೋವು, ಹೆಚ್ಚಾಗಿ ಬೆವರುವುದು, ಬಲಹೀನತೆ, ತಲೆ ತಿರುಗುವಿಕೆ, ಗೊಂದಲಮಯ ರೀತಿಯಲ್ಲಿ ವರ್ತಿಸುವುದು, ಇನ್ನಿತರ ಲಕ್ಷಣಗಳು ಕಂಡುಬರುವ ಸಾಧ್ಯತೆ ಇರುತ್ತದೆ.ಇಂತಹ ಲಕ್ಷಣಗಳು ಕಂಡು ಬಂದಲ್ಲಿ ವೈದ್ಯರ ಸಲಹೆ ಪಡೆದು ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಎಂದರು.

ಅತೀ ಹೆಚ್ಚು ತಾಪಮಾನಕ್ಕೆ ತುತ್ತಾಗುವಂತಹ ಹಳ್ಳಿಗಳನ್ನು ಗುರುತಿಸಿ ಮತ್ತು ಕುಡಿಯುವ ನೀರಿನ ಸೌಲಭ್ಯಗಳ ಲಭ್ಯತೆಯನ್ನು ಖಚಿತ ಪಡಿಸಿಕೊಳ್ಳಿ ಎಂದರು.

ಅತೀ ಹೆಚ್ಚು ತಾಪಮಾನದ ಪ್ರತಿಕೂಲ ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಮತ್ತು ಅತೀ ಹೆಚ್ಚು ತಾಪಮಾನದ ಸಮಯದಲ್ಲಿ ಮಾಡಬೇಕಾದ ಮತ್ತು ಮಾಡಬಾರದ ವಿಷಯಗಳ ಬಗ್ಗೆ ಅರಿವು ಮೂಡಿಸಲು ಆರೋಗ್ಯ ಇಲಾಖೆ ಹೆಚ್ಚಿನ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಿ ಎಂದರು.

ರಾಜ್ಯದಲ್ಲಿ ಅತೀ ಹೆಚ್ಚು ತಾಪಮಾನದ ಪರಿಸ್ಥಿತಿಗಳ ಬಗ್ಗೆ ಪ್ರವಾಸಿಗರಿಗೆ ಸಲಹೆಗಳನ್ನು ಪ್ರಚಾರ ಮಾಡುವುದು. ಧಾರ್ಮಿಕ ಸ್ಥಳಗಳಲ್ಲಿ ಯಾತ್ರಾರ್ಥಿಗಳಿಗೆ ಸುರಕ್ಷಿತ ಕುಡಿಯುವ ನೀರಿನ ಲಭ್ಯತೆಯನ್ನು ಖಚಿತ ಪಡಿಸಿಕೊಳ್ಳುವುದು ಹಾಗೂ ತಾತ್ಕಾಲಿಕ ನೆರಳಿನ ಪ್ರದೇಶಗಳನ್ನು ನಿರ್ಮಿಸಬೇಕು ಎಂದರು.

ಬಿಸಿಲಿನ ಸಮಯದಲ್ಲಿ ಅದರಲ್ಲೂ ವಿಶೇಷವಾಗಿ ಮಧ್ಯಾಹ್ನ 12ರಿಂದ 4 ರವರೆಗೆ ಬಿಸಿಲಿಗೆ ಹೋಗುವುದನ್ನು ತಪ್ಪಿಸಬೇಕು. ಮಧ್ಯಾಹ್ನದ ಸಮಯದಲ್ಲಿ ಹೊರಾಂಗಣದಲ್ಲಿ ಶ್ರಮದಾಯಕ ಚಟುವಟಿಕೆಗಳನ್ನು ಮಾಡಬಾರದು. ಪಾದರಕ್ಷೆಗಳನ್ನು ಧರಿಸದೇ ಹೊರಗಡೆ ಹೋಗಬಾರದು. ಉತ್ತಮ ಗಾಳಿ ಪ್ರಸಾರವಾಗಿ ತಂಪಾಗಿರುವಂತೆ ಕಿಟಕಿ, ಬಾಗಿಲುಗಳನ್ನು ತೆರೆದಿಡಬೇಕು. ಮದ್ಯಪಾನ (ಆಲ್ಕೋಹಾಲ್), ಟೀ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳು ಅಥವಾ ಹೆಚ್ಚು ಸಕ್ಕರೆ ಅಂಶವನ್ನು ಹೊಂದಿದ ಪಾನೀಯಗಳನ್ನು ಸೇವಿಸುವುದನ್ನು ತಪ್ಪಿಸಬೇಕು. ಇವು ದೇಹವನ್ನು ನಿರ್ಜಲೀಕರಣ ಹಾಗೂ ಹೊಟ್ಟೆ ನೋವನ್ನು ಉಂಟು ಮಾಡುತ್ತವೆ ಎಂದರು

ಪ್ರಾಣಿಗಳಲ್ಲಿ ಬಿಸಿಗಾಳಿಗೆ ಸಂಬಂಧಿತ ಕಾಯಿಲೆಯ ಚಿಕಿತ್ಸೆಗೆ ನಿಯಮಾನುಸಾರ ಸಂಬಂಧಿಸಿದ ಪಶು ವೈದ್ಯಕೀಯ ಔಷಧ ಗಳನ್ನು ಶೇಖರಣೆ ಮಾಡಬೇಕು ಎಂದರು.

ಸಾಧ್ಯವಾದಷ್ಟು ಮಟ್ಟಿಗೆ ಸಭೆ/ಸಮಾರಂಭಗಳನ್ನು ತಂಪಾದ ವಾತಾವರಣವಿರುವ ಅವಧಿಯಲ್ಲಿ (ಬೆಳಿಗ್ಗೆ ಅಥವಾ ಸಂಜೆ) ನಿಗದಿಪಡಿಸುವುದು ಉತ್ತಮ ಎಂದರು.

ತೀವ್ರ ಬಿಸಿಲಿನ ಹಿನ್ನೆಲೆ ಅರಣ್ಯ ಪ್ರದೇಶ ಗಳಲ್ಲಿ ಬೆಂಕಿ ಅಪಘಾತ ಸಂಭವಿಸುವ ಸಾಧ್ಯತೆಗಳಿದ್ದು, ಅವುಗಳ ಬಗ್ಗೆ ಎಚ್ಚರ ವಹಿಸಿ ಎಂದು ಅರಣ್ಯ ಇಲಾಖೆ ಅಧಿಕಾರಿ ಗಳಿಗೆ ತಿಳಿಸಿದರು.

ಕೆರೆಗಳಲ್ಲಿ ಹೂಳೆತ್ತುವ ಕಾರ್ಯ ವ್ಯವಸ್ಥಿತವಾಗಿ ನಡೆಯಬೇಕು: ಜಿಲ್ಲೆಯಲ್ಲಿ ಅತಿಯಾದ ಬಿಸಿಲಿನ ತಾಪಮಾನ ಹಾಗೂ ಮಳೆ ಬಾರದೆ ಇರುವುದರಿಂದ ಕೆರೆಗಳೆಲ್ಲ ಬತ್ತಿ ಹೋಗಿವೆ. ಮುಂದಿನ ದಿನಗಳಲ್ಲಿ ಮಳೆಗಾಲ ಬರುವುದರಿಂದ ಮಳೆ ನೀರಿನ ಶೇಖರಣೆ ಮಾಡಲು ಕೆರೆಗಳಲ್ಲಿ ಹೂಳೆತ್ತುವ ಕಾರ್ಯ ವ್ಯವಸ್ಥಿತವಾಗಿ ಹಾಗೂ ಶೀಘ್ರವಾಗಿ ನಡೆಯಬೇಕು ಎಂದರು.

ತಾಲ್ಲೂಕುವಾರು ತಹಶೀಲ್ದಾರ್ ಹಾಗೂ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಇದುವರೆಗೂ ಕೆರೆಗಳಲ್ಲಿ ಹೂಳೆತ್ತಿರುವ ಬಗ್ಗೆ ಹಾಗೂ ಈ ತಿಂಗಳಲ್ಲಿ ಹೂಳೆತ್ತುವ ಕೆರೆಗಳ ಬಗ್ಗೆ ಮಾಹಿತಿ ನೀಡಬೇಕು ಎಂದರು.

ನೀರು ಬತ್ತಿ ಹೋಗಿರುವ ಕೆರೆಗಳಲ್ಲಿ ರೈತರು ಅನಧಿಕೃತವಾಗಿ ಮಣ್ಣನ್ನು ಇತಿ-ಮಿತಿಯಿಲ್ಲದೇ ತೆಗೆಯುತ್ತಿದ್ದಾರೆ ಎಂದು ದೂರುಗಳು ಕೇಳಿ ಬರುತ್ತಿದೆ. ಮಣ್ಣು ಸಾಗಿಸುವಾಗ ರಸ್ತೆಯ ಮೇಲೆಲ್ಲಾ ಮಣ್ಣು ಹಾಗೂ ಧೂಳು ಚೆಲ್ಲುತ್ತಿದ್ದೂ, ವಾಹನ ಸವಾರರಿಗೆ ತುಂಬಾ ತೊಂದರೆ ಉಂಟಾಗುತ್ತಿದೆ. ಈ ಬಗ್ಗೆ ಸಂಬಂಧ ಪಟ್ಟ ಇಲಾಖೆಯವರು ಕ್ರಮ ಕೈಗೊಳ್ಳಿ ಎಂದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶೇಕ್ ತನ್ವೀರ್ ಆಸೀಫ್ ಮಾತನಾಡಿ, ಮಾರ್ಚ್ ತಿಂಗಳಲ್ಲಿ ವಿಶ್ವ ಜಲ ದಿನದ ಪ್ರಯುಕ್ತ ಕೆರೆಗಳ ಹೂಳೆತ್ತುವ ಹಾಗೂ ಕೆರೆ ಅಭಿವೃದ್ಧಿಗೆ ಚಾಲನೆ ನೀಡಲಾಗಿದೆ. ಕೆರೆಗಳು, ಕಲ್ಯಾಣಿ, ಕಾಲುವೆಗಳ ಅಭಿವೃದ್ಧಿ ಕಾಮಗಾರಿಯನ್ನು ವ್ಯವಸ್ಥಿತ ವಾಗಿ ನಡೆಸಿ. ಪ್ರತಿ ತಾಲ್ಲೂಕುವಾರು 2 ಕೆರೆಗಳ ಅಭಿವೃದ್ಧಿ ಮಾಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಮಳೆಯಾಗದ ಕಾರಣ ನೀರಿನ ಸಮಸ್ಯೆಯಿದ್ದು, ಜನ ಮತ್ತು ಜಾನುವಾರುಗಳಿಗೆ ಸಮಸ್ಯೆಯಾಗದಂತೆ ಆಯಾ ಗ್ರಾಮ ಪಂಚಾಯಿತಿಯ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಿ ಎಂದರು.

ಹಿಂದಿನ ವರ್ಷಗಳ ಮಾಹಿತಿಯ ಆಧಾರದ ಮೇಲೆ ಕುಡಿಯುವ ನೀರಿನ ಕೊರತೆ ಉಂಟಾಗುವ ಗ್ರಾಮಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಈ ಗ್ರಾಮಗಳ ವಸ್ತುಸ್ಥಿತಿಯ ಮೇಲೆ ನಿಗಾವಹಿಸಿ ಎಂದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಮತ್ತು ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳ ಸಭೆಗಳನ್ನು ನಿರಂತರವಾಗಿ ನಡೆಸಿ ತೊಂದರೆಗಳನ್ನು ಪರಿಹರಿಸಿ ಎಂದರು.

ಸಭೆಯಲ್ಲಿ ಉಪ ವಿಭಾಗಾಧಿಕಾರಿ ಮಹೇಶ್, ಜಿಲ್ಲಾ ಕುಟುಂಬ ಮತ್ತು ಕಲ್ಯಾಣಾಧಿಕಾರಿ ಡಾ.ಮೋಹನ್, ಡಿ.ಎಫ್.ಒ ರಾಜು ಹಾಗೂ ಇತರರಿದ್ದರು.

ಡಿಪ್ಲೋಮಾ ಕೋರ್ಸ್ ಕಲಿಕೆಗಾಗಿ ಅರ್ಜಿ ಆಹ್ವಾನ

ಮಂಡ್ಯ: ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.) ಕೋರ್ಸ್ ಕಲಿಕೆಗಾಗಿ 44 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವ್ಯಾಸಂಗದ ಸಮಯದಲ್ಲಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500 ರಂತೆ ಶಿಷ್ಯ ವೇತನ ನೀಡಲಾಗುವುದು 03 ವರ್ಷಗಳ ಡಿಪ್ಲೋಮಾ ಕೋರ್ಸ್ ಗಾಗಿ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

01 ಜುಲೈ 2024ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15ರಿಂದ 25ರ ವಯೋಮಿತಿಯಲ್ಲಿರಬೇಕು. 02 ವರ್ಷಗಳ ಡಿಪ್ಲೋಮಾ ಕೋರ್ಸ್‌ಗಾಗಿ ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

01 ಜುಲೈ 2024ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15ರಿಂದ 27 ರ ವಯೋಮಿತಿಯಲ್ಲಿರಬೇಕು.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ (ಕರ್ನಾಟಕ), ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು), ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) ಮತ್ತು ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) ಇಲ್ಲಿ ಕೋರ್ಸ್ ಪ್ರವೇಶ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು.

ಮೇ 31 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ ಅರ್ಜಿಯನ್ನು https://khtigadag.ac.in/AdmissionForm.pdf ವೆಬ್‌ಸೈಟ್ ಮೂಲಕ ಡೌನ್ಲೋಡ್ ಮಾಡಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ನರಸಾಪುರ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ಪ್ರಾಂಶುಪಾಲರು ದೂ.ಸಂ: 08372-297221, ಹಾಗೂ ಮೊ. 9449162822 ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಧರ್ಮಸ್ಥಳ ಸಂಸ್ಥೆಯಿಂದ ವಿಕಲ ಚೇತನ ಬಾಲಕನಿಗೆ ವೀಲ್‌ಚೇರ್ ವಿತರಣೆ



ಮಂಡ್ಯ: ಹೊಸಹಳ್ಳಿ ಯೋಜನಾ ಕಚೇರಿ ವ್ಯಾಪ್ತಿಯ ಕೀಲಾರ ವಲಯದ ಉಮ್ಮಡಹಳ್ಳಿ ಕಾರ್ಯಕ್ಷೇತ್ರದಲ್ಲಿ ಸ್ಫೂರ್ತಿ ಹಾಗೂ ನಾಗ ದಂಪತಿಯ ರಕ್ಷಿತ್ ಎಂಬ ಅಂಗವಿಕಲ ಹುಡುಗನಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜನ ಮಂಗಲ ಕಾರ್ಯಕ್ರಮದ ಅಡಿಯಲ್ಲಿ ಉಚಿತವಾಗಿ ಮಂಜೂರಾದಂತಹ ವೀಲ್ ಚೇರನ್ನು ತಾಲೂಕು ಯೋಜನಾಧಿಕಾರಿಗಳಾದ ಶ್ರೀಯುತ ಗಿರೀಶ್ ಫಲಾನುಭವಿಗೆ ವಿತರಿಸಿದರು.

ಈ ಸಂದರ್ಭದಲ್ಲಿ ವಲಯದ ಮೇಲ್ವಿಚಾರಕರು ದೀಕ್ಷಿತಾ,ತಾಲೂಕು ನೋಡಲ್ ಅಧಿಕಾರಿ ಅಶೋಕ, ಒಕ್ಕೂಟದ ಪದಾಧಿಕಾರಿಗಳು, ಹಾಲು ಉತ್ಪಾದಕರ ಘಟಕದ ಕಾರ್ಯದರ್ಶಿ, ಸೇವಾ ಪ್ರತಿನಿಧಿ ಹಾಗೂ ಸ್ಥಳೀಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಬಸ್ ಸೌಲಭ್ಯ ಕಲ್ಪಿಸಲು ಒತ್ತಾಯ



ಕೆ.ಆರ್.ಪೇಟೆ: ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಬಸ್ಸುಗಳನ್ನು ಹಾಕಲು ಹೆಚ್.ಡಿ.ದೇವೇಗೌಡ ಅಭಿಮಾನಿ ಬಳಗದ ಅಧ್ಯಕ್ಷ ಗೌರೀಶ್ ಮನವಿ ಮಾಡಿದ್ದಾರೆ.

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಶಕ್ತಿ ಯೋಜನೆಯ ಅನುಷ್ಠಾನಕ್ಕೆಂದು ನೀವು ಉಚಿತ ಬಸ್ಸಿನ ವ್ಯವಸ್ಥೆ ಮಾಡಿದ್ದೀರಿ. ಆದರೆ ಆ ಅವ್ಯವಸ್ಥೆ ಯಾವ ಮಟ್ಟಗಾಗಿದೆ ಎಂಬುದನ್ನು ಬಿಮ್ಮೆ ಬಸ್ ನಲ್ಲಿ ಪ್ರಯಾಣಿಸಿ ಖಾತ್ರಿ ಪಡಿಸಿಕೊಳ್ಳಿ ಎಂದು ಕೆ.ಎಸ್.ಆರ್.ಟಿ.ಸಿ ಬಸ್‌ನಲ್ಲಿ ಪ್ರಯಾಣಿಸುವ ಪ್ರಯಾಣಿಕರು ಆಗ್ರಹಿಸಿದ್ದಾರೆ.

ಈ ಕುರಿತು ತಾಲ್ಲೂಕು ಹೆಚ್.ಡಿ. ದೇವೇಗೌಡ ಅಭಿಮಾನಿ ಬಳಗದ ಅಧ್ಯಕ್ಷ ಗೌರೀಶ್ ಮಾತನಾಡಿ ಸರ್ಕಾರ ಜನರಿಗೆ ಕಲ್ಪಿಸಿರುವ ಗ್ಯಾರಂಟಿಗಳನ್ನು ನಾವು ಸ್ವಾಗತಿಸುತ್ತೇವೆ. ಆದರೆ ಗ್ಯಾರಂಟಿಗಳ ಹೆಸರಿನಲ್ಲಿ ಮೋಸ, ವಂಚನೆ, ದೋಖಾ ಮಾಡುವುದನ್ನು ನಾಗರೀಕರು ಎಂದಿಗೂ ಸಹಿಸುವುದಿಲ್ಲ. ಶಕ್ತಿ ಯೋಜನೆ ಜಾರಿಗೆ ಬಂದಾಗಿನಿಂದ ಪ್ರತಿದಿನ ಓಡಾಡುವ ಸರ್ಕಾರಿ ನೌಕರರಿಗೆ, ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಆಸ್ಪತ್ರೆಗೆ, ಶಾಲಾ ಕಾಲೇಜುಗಳಿಗೆ ಹೋಗಲು ತುಂಬಾ ತೊಂದರೆ ಯಾಗುತ್ತಿದೆ.

ಉಚಿತ ಬಸ್‌ನಲ್ಲಿ ಅನಾವಶ್ಯಕವಾಗಿ ಓಡಾಡುವವರ ಸಂಖ್ಯೆ ಹೆಚ್ಚಾಗಿದೆ. ಆದರೆ ಪ್ರಯಾಣಿಕರಿಗೆ ಅನುಗುಣವಾಗಿ ನೀವು ಬಿಟ್ಟಿರುವ ಬಸ್ಸುಗಳ ಸಂಖ್ಯೆ ಕಡಿಮೆ ಇದೆ. ಯಾವುದೇ ಗ್ಯಾರಂಟಿಗಳನ್ನ ಕೊಡಬೇಕಾದರೆ ಮೊದಲು ಅದರ ಸಾಧಕ ಬಾಧಕಗಳನ್ನು ನೋಡಿಕೊಡಬೇಕು. ನಂತರ ತಜ್ಞರ ವರದಿ ಆಧರಿಸಿ ಅನುಷ್ಠಾನಗೊಳಿಸಬೇಕು. ಆದರೆ ನೀವು ಹಾಗೆ ಮಾಡಲ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–3
04–05–2024
ಮೈಸೂರು



ಅಪರ ಜಿಲ್ಲಾಧಿಕಾರಿ ಪಿ.ಶಿವರಾಜುಗೆ ಪಿಎಚ್‌ಡಿ ಪದವಿ

ಮೈಸೂರು: ಜಿಲ್ಲೆಯ ಹಿರಿಯ ಕೆಎಎಸ್ ಅಧಿಕಾರಿಗಳಾದ ಅಪರ ಜಿಲ್ಲಾಧಿಕಾರಿಗಳು ಮತ್ತು ಅಪರ ಜಿಲ್ಲಾ ದಂಡಾಧಿಕಾರಿಗಳಾದ ಪಿ.ಶಿವರಾಜು ರವರಿಗೆ ಮೈಸೂರು ವಿಶ್ವವಿದ್ಯಾನಿಲಯದಿಂದ ಪಿಎಚ್‌ಡಿ ಪ್ರದಾನ ಮಾಡಲಾಗಿದೆ.

ಪಿ.ಶಿವರಾಜುರವರು ತಮ್ಮ ಹುಟ್ಟೂರಿನ ತಾಲೂಕು ಆದ ಮಳವಳ್ಳಿ ತಾಲೂಕಿನ ಎಲ್ಲಾ ಸ್ಥಳನಾಮಗಳ ಬಗ್ಗೆ 'ಮಳವಳ್ಳಿ ತಾಲೂಕಿನ ಸ್ಥಳನಾಮಗಳ ಸಾಂಸ್ಕೃತಿಕ ಅಧ್ಯಯನ' ಎಂಬ ಶೀರ್ಷಿಕೆಯಡಿಯಲ್ಲಿ ಸಂಶೋಧನೆ ನಡೆಸಿ, ಅಧ್ಯಯನ ಮಾಡಿ ಧೀರ್ಘ ಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಮಂಡಿಸಿದ್ದರು.

ಸದರಿ ಪ್ರಬಂಧವನ್ನು ಮತ್ತು ಅದರ ಮೌಲ್ಯಗಳನ್ನು ಪರಿಗಣಿಸಿದ ಮೈಸೂರು ವಿಶ್ವವಿದ್ಯಾನಿಲಯವು ಅಪರ ಜಿಲ್ಲಾಧಿಕಾರಿಗಳಾದ ಪಿ.ಶಿವರಾಜು ರವರ ಸಂಶೋಧನೆಯನ್ನು ಮತ್ತು ಅದರ ಸಾಂಸ್ಕೃತಿಕ ಮೌಲ್ಯಗಳ ಹಿನ್ನೆಲೆಯಲ್ಲಿ ಪರಿಗಣಿಸಿ ಸಂಶೋಧನೆಗೆ ಮನ್ನಣೆಯನ್ನು ನೀಡಿ ಪಿ.ಎಚ್.ಡಿ ಪದವಿಯನ್ನು ಅಂಗೀಕರಿಸಿ ಪ್ರದಾನ ಮಾಡಲಾಗಿದೆ. ಪಿ.ಶಿವರಾಜುರವರು ಮಹಾರಾಜ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾದ ಪ್ರೊ.ವಿಶ್ವನಾಥ್ ರವರ ಮಾರ್ಗದರ್ಶನದಲ್ಲಿ ಸದರಿ ಪ್ರಬಂಧ ರಚನೆ ಮಾಡಿ ಮಂಡಿಸಿದ್ದರು. ಜಿಲ್ಲೆಯ ಹಿರಿಯ ಅಧಿಕಾರಿಯಾಗಿ ಬಿಡುವಿಲ್ಲದ ಕೆಲಸಗಳ ಮಧ್ಯೆಯೂ ಅಧ್ಯಯನವನ್ನು ಕೈಬಿಡದೆ ಸಂಶೋಧನೆಯನ್ನು ಕೈಗೊಂಡಿರುವುದು ಇತರರಿಗೂ ಮಾದರಿಯಾಗಿದೆ ಎಂದು ಸಾರ್ವಜನಿಕರು, ಸ್ನೇಹಿತರು, ಕುಟುಂಬದವರು ಹರ್ಷ ವ್ಯಕ್ತಪಡಿಸಿರುತ್ತಾರೆ.

ಬಿರುಗಾಳಿ ಮಳೆಗೆ ಅಪಾರ ಪ್ರಮಾಣದ ಬೆಳೆ ಹಾನಿ



ಹಲಗೂರು: ವಿವಿಧೆಡೆ ಬಾರಿ ಬಿರುಗಾಳಿ ಸಹಿತ ಮಳೆಗೆ ಮನೆಗಳ ಮೇಲ್ಛಾವಣಿ ಹಾರಿ ಹೋಗಿರುವ, ವಿಳ್ಯದೆಲೆ ತೋಟ ಮತ್ತು ಮುಸುಕಿನ ಜೋಳ ಹಾಗೂ ಮರಗಳು ಮತ್ತು ವಿದ್ಯುತ್ ಕಂಬಗಳು ಮುರಿದು ಬಿದ್ದಿರುವ ಘಟನೆ ಜರುಗಿದೆ.

ಹಲಗೂರು ಹೋಬಳಿಯ ಬೆನಮನಹಳ್ಳಿ, ಬಾಳೆ ಹೊನ್ನಿಗ, ಹಂಡನಹಳ್ಳಿ, ಗೊಲ್ಲರಹಳ್ಳಿ, ಹಲಗೂರು ಸೇರಿದಂತೆ ಇತರೆ ಗ್ರಾಮಗಳಲ್ಲಿ ಬಿರುಗಾಳಿ ಸಹಿತ ಮಳೆಗೆ ಬಾರಿ ಗಾತ್ರದ ಮರುಗಳು, ವಿದ್ಯುತ್ ಕಂಬಗಳು ವಿವಿಧೆಡೆ ಮುರಿದು ಬಿದ್ದಿವೆ.

ಬೆನಮನಹಳ್ಳಿಯ ಕೃಷ್ಣೇಗೌಡರಿಗೆ ಸೇರಿದ ಮನೆಯ ಮೇಲ್ಛಾವಣಿ ಬಿರುಗಾಳಿ ಸಹಿತ ಮಳೆಗೆ ಸುಮಾರು 40 ಕ್ಕೂ ಹೆಚ್ಚು ಸಿಮೆಂಟಿನ ಶೀಟುಗಳು ಹಾರಿ ಹೋಗಿದ್ದು ಮನೆಯಲ್ಲಿದ್ದ ಸಾಲ್ಕು ಕ್ವಿಂಟಲ್ ರಾಗಿ ಬಿತ್ತನೆ ಮಾಡಲು ಶೇಖರಿಸಿ ಮಾಡಿ ಇಟ್ಟಿದ್ದ ಕಡಲೆಕಾಯಿ,ಹುರುಳಿ ಮತ್ತು ದ್ವಿದಳ ಧಾನ್ಯಗಳು ನಾಶವಾಗಿದೆ ಇದರಿಂದಾಗಿ ಅಪಾರ ಪ್ರಮಾಣ ವಸ್ತುಗಳು ನಷ್ಟ ಉಂಟಾಗಿದೆ.

ಬಾಳೆ ಹೊನ್ನಿಗ ಗ್ರಾಮದ ಮಾದೇಶ್ ಮತ್ತುಗೊಲ್ಲರ ಹಳ್ಳಿ ಗ್ರಾಮದ ಮರಿಗಳ್ಳಯ್ಯ ಎಂಬುವವರಿಗೆ ಸೇರಿದ ಮನೆಯ ಮೇಲ್ಛಾವಣಿ ಬಿರುಗಾಳಿ ಸಹಿತ ಮಳೆಗೆ ಸಂಪೂರ್ಣವಾಗಿ ಹಾರಿಹೋಗಿದ್ದು ಸುಮಾರು 80 ಕ್ಕೂ ಹೆಚ್ಚು ಸಿಮೆಂಟಿನ ಶೀಟುಗಳು ಹಾರಿ ಹೋಗಿದ್ದು ಅಪಾರ ಪ್ರಮಾಣದಲ್ಲಿ ನಷ್ಟ ಉಂಟಾಗಿದೆ.



ಬಾಳೆ ಹೊನ್ನಿಗ ಗ್ರಾಮಕ್ಕೆ ಸೇರಿದ ಮೆಕಟೇಶ, ಆನಂದ್,ಮಾದಯ್ಯಕುಳ್ಳಯ್ಯಬೆಟ್ಟಯ್ಯ ರವರಿಗೆ ಸೇರಿದ 15 ಎಕರೆಗೂ ಹೆಚ್ಚು ವಿಳ್ಯದೆಲೆ ತೋಟ ಬಾರಿ ಬಿರುಗಾಳಿ ಸಹಿತ ಮಳೆಗೆ ಮುರಿದು ಬಿದ್ದು ನೆಲಕಚ್ಚಿದ್ದು ಅಪಾರ ಪ್ರಮಾಣದಲ್ಲಿ ನಷ್ಟ ಉಂಟಾಗಿದೆ.

ಹಂಡನ ಹಳ್ಳಿಯ ಗ್ರಾಮದ ರಾಮಚಂದ್ರ ರವರಿಗೆ ಸೇರಿದ ಒಂದು ಎಕರೆ ಜಮೀನಿನಲ್ಲಿ ಮುಸುಕಿನ ಜೋಳ ಬೆಳೆಯನ್ನು ಬೆಳೆಯಲಾಗಿದ್ದು ಬಿರುಗಾಳಿ ಸಹಿತ ಮಳೆಗೆ ಸಂಪೂರ್ಣವಾಗಿ ಬೆಳೆದ ಮುಸುಕಿನ ಜೋಳ ನೆಲಕಚ್ಚಿದ್ದೆ, ಅಪಾರ ಪ್ರಮಾಣದಲ್ಲಿ ನಷ್ಟ ಉಂಟಾಗಿದೆ.

ಒಟ್ಟಿನಲ್ಲಿ ವರ್ಷದ ಮೊದಲ ವರ್ಷಾಧಾರೆ ಬಾರಿ ಅವಾಂತರ ಉಂಟು ಮಾಡಿದ್ದು ಅದರೂ ಬಿರು ಬಿಸಿಲಿನಿಂದ ಬೇಗೆಗೆ ತಂಪೇರದಿದ್ದ,ರೈತರು ಮೊಗದಲ್ಲಿ ಮಂದಾಸ ಮೂಡಿದೆ.

ಎಸ್.ಜೆ.ಯೇಸುರಾಜ್ ಹಿಂದೂ ಧರ್ಮಕ್ಕೆ ಸೇರಿದ್ದಾರೆ: ಧಾರ್ಮಿಕ ದತ್ತಿ ಇಲಾಖೆ ಆಯುಕ್ತರಿಂದ ಸ್ಪಷ್ಟನೆ

ಬೆಂಗಳೂರು: ಎಸ್.ಜೆ. ಯೇಸುರಾಜ್ ಅವರು 17 ನೇ ಜನವರಿ 2005 ರಂದು ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಯಲ್ಲಿ ನೌಕರರಾಗಿ ಆಯ್ಕೆಯಾಗಿ ಕರ್ತವ್ಯಕ್ಕೆ ಹಾಜರಾಗಿದ್ದು, ಇವರ ಶಾಲಾ ದಾಖಲಾತಿ ಹಾಗೂ ನೇಮಕಾತಿ ಸಂದರ್ಭದಲ್ಲಿ ಹಾಜರು ಪಡಿಸಿರುವ ದಾಖಲಾತಿಗಳಂತೆ ಇವರು ಹಿಂದೂ ಧರ್ಮಕ್ಕೆ ಸೇರಿದವರಾಗಿರುತ್ತಾರೆ.

ಕೆಲವು ಸಾಮಾಜಿಕ ಜಾಲತಾಣಗಳಲ್ಲಿ ಇವರು ಕ್ರಿಶ್ಚಿಯನ್ ಧರ್ಮಕ್ಕೆ ಸೇರಿದವರು ಎಂದು ಬಿತ್ತರಿಸಲಾಗುತ್ತಿದ್ದು, ಇವರು ಹಿಂದೂ ಧರ್ಮಕ್ಕೆ ಸೇರಿದವರೆಂದು ಧಾರ್ಮಿಕ ದತ್ತಿ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವ್ಯವಸ್ಥಿತ ಘನ ತ್ಯಾಜ್ಯ ನಿರ್ವಹಣೆಯಿಂದ ಆರೋಗ್ಯಪೂರ್ಣ ವಾತಾವರಣ: ಡಾ.ರಾಜೇಂದ್ರ

ಮೈಸೂರು: ವ್ಯವಸ್ಥಿತ ಘನ ತ್ಯಾಜ್ಯ ನಿರ್ವಹಣೆಯಿಂದ ಸುತ್ತಮುತ್ತಲಿನ ಪರಿಸರದ ನೈರ್ಮಲ್ಯ ಕಾಪಾಡಿಕೊಳ್ಳುವ ಜತೆಗೆ ಆರೋಗ್ಯಪೂರ್ಣ ವಾತಾವರಣ ನಿರ್ಮಿಸಬಹುದು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರು ಸಲಹೆ ನೀಡಿದರು.

ಇಂದು ಮೈಸೂರು ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ನಡೆದ ಘನ ಮತ್ತು ದ್ರವ ತ್ಯಾಜ್ಯಗಳು ವ್ಯವಸ್ಥಿತ ನಿರ್ವಹಣೆ ಸಂಬಂಧ ನಡೆದ ಸಭೆಯಲ್ಲಿ ಮಾತನಾಡಿದ ಅವರು, ನಗರದ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ಹಸಿ ಕಸ, ಒಣ ಕಸ ಹಾಗೂ ನಿರುಪಯುಕ್ತ ಕಸ ಎಂದು ಮೂರು ಭಾಗಗಳಾಗಿ ಪ್ರತ್ಯೇಕವಾಗಿ ವಿಂಗಡಿಸಿ, ವಿಲೇವಾರಿ ಮಾಡಬೇಕು. ನಗರದ ಯಾವುದೇ ಸಾರ್ವಜನಿಕ ಸ್ಥಳದಲ್ಲಿ ತ್ಯಾಜ್ಯದ ರಾಶಿ ಕಂಡು ಬರಬಾರದು ಎಂದು ತಿಳಿಸಿದರು.

ಮೈಸೂರನ್ನು ತ್ಯಾಜ್ಯ ಮುಕ್ತ ನಗರಿಯಾನ್ನಾಗಿಸಲು ಮೈಸೂರು ಮಹಾನಗರ ಪಾಲಿಕೆಯ ಅಧಿಕಾರಿಗಳು ಮುಂದಾಗಬೇಕು. ಈ ಬಾರಿ ಸ್ವಚ್ಛತಾ ನಗರಿ ಪ್ರಶಸ್ತಿ ಮುಡಿಗೇರಿಸಿಕೊಳ್ಳಲು ಮೈಸೂರು ಮಹಾನಗರ ಪಾಲಿಕೆಯು ಪ್ಲಾಸ್ಟಿಕ್ ಮುಕ್ತ ಮೈಸೂರು ನಗರ ಮಾಡಲು ಅಧಿಕಾರಿಗಳು ಮುಂದಾಗಬೇಕು. ಇದನ್ನು ಎಲ್ಲರೂ ವೈಯಕ್ತಿಕವಾಗಿ ಪರಿಗಣಿಸಿ ಇಲಾಖೆಗಳ ಸಮನ್ವಯತೆಯೊಂದಿಗೆ ಕೆಲಸ ನಿರ್ವಹಿಸಿ ಯಶಸ್ವಿ ಮಾಡಬೇಕು ಎಂದರು.

ನಗರದಾದ್ಯಂತ ಪ್ರಮುಖ ಸ್ಥಳಗಳಲ್ಲಿ ತ್ಯಾಜ್ಯದ ರಾಶಿಗಳು ಕಂಡುಬರುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆ ಹಾಗೂ ಸುತ್ತಮುತ್ತಲಿನ ವಾತಾವರಣ ಹಾಳಾಗಲು ಕಾರಣವಾಗುತ್ತಿದೆ. ಹಾಗಾಗಿ ಮೊದಲು ತ್ಯಾಜ್ಯಗಳು ಹುಟ್ಟುತ್ತಿರುವ ಮೂಲವನ್ನು ತಿಳಿದು ಅಲ್ಲಿಂದಲೇ ನಿಯಂತ್ರಿಸಬೇಕು. ಪ್ಲಾಸ್ಟಿಕ್ ನಿರ್ಮೂಲನೆ ಮಾಡಿ ಮೈಸೂರನ್ನು ಮತ್ತೆ ಸ್ವಚ್ಛತಾ ನಗರಿ ಮಾಡಲು ಅಧಿಕಾರಿಗಳ ಜೊತೆಗೆ ಸಾರ್ವಜನಿಕರ ಸಹಕಾರವು ಬಹಳ ಮುಖ್ಯವಾಗಿರುತ್ತದೆ ಎಂದು ಅವರು ತಿಳಿಸಿದರು.



ಚಿತ್ರೀಸ್‌ಗಢದ ಅಂಬಿಕಾಪುರದಲ್ಲಿ ಪ್ಲಾಸ್ಟಿಕ್ ನಿಯಂತ್ರಣಕ್ಕೆ ಏನೂತ ಯೋಜನೆ ಜಾರಿಯಾಗಿದ್ದು ಈ ಯೋಜನೆಯ ಪರಿಕಲ್ಪನೆ ವಿಶೇಷವಾಗಿದೆ. ಈ ಮಾದರಿಯಲ್ಲಿ ಟನ್ ಗಟ್ಟಲೇ ಉತ್ಪತ್ತಿಯಾಗುತ್ತಿರುವ ಪ್ಲಾಸ್ಟಿಕ್ ತ್ಯಾಜ್ಯ ವಿಲೇವಾರಿಗೆ ಜಿಲ್ಲಾಡಳಿತ ಚಿಂತನೆ ನಡೆಸಿದ್ದು ಹಸಿರು ನೀಗಿಸುವುದರ ಜೊತೆಗೆ ಪ್ಲಾಸ್ಟಿಕ್ ತ್ಯಾಜ್ಯ ತಡೆಗಟ್ಟುವಲ್ಲಿ ಈ ಯೋಜನೆ ಪರಿಣಾಮಕಾರಿಯಾಗಿದೆ. ಈ ನಿಟ್ಟಿನಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹಿಸಿ ಕೊಟ್ಟರೆ ಅವರಿಗೆ ಇಂದಿರಾ ಕ್ಯಾಂಟೀನ್‌ನಲ್ಲಿ ಉಚಿತ ಊಟ ನೀಡುವ ಯೋಜನೆ ರೂಪಿಸಲು ಜಿಲ್ಲಾಡಳಿತ ಚಿಂತನೆ ನಡೆಸಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮುಂಬರುವ ದಿನಗಳಲ್ಲಿ ಕ್ಲೀನ್ ಸಿಟಿ ಸರ್ವೆಯಲ್ಲಿ ಮೈಸೂರು 7 ಸ್ಟಾರ್ ಪಡೆಯುವ ಗುರಿಯನ್ನು ಹೊಂದಿದ್ದು, ಈ ಗುರಿಯನ್ನು ತಲುಪುವಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಪ್ಲಾಸ್ಟಿಕ್‌ನ ಬಳಕೆ ಹೆಚ್ಚಾಗುತ್ತಿದ್ದು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಆದಷ್ಟು ಪ್ಲಾಸ್ಟಿಕ್ ಮುಕ್ತ ನಗರ ಮಾಡಬೇಕು. ಕೆಲವೊಂದು ಪುನರ್ ಬಳಕೆ ಮಾಡಬಹುದಾದ ವಸ್ತುಗಳನ್ನು ಉಪಯೋಗಿಸಿ ಆರೋಗ್ಯಕರ ವಾತಾವರಣ ನಿರ್ಮಾಣಮಾಡುವಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮೈಸೂರಿನ 65 ವಾರ್ಡ್‌ನ ಪ್ರತಿ ಯೊಬ್ಬ ಅಧಿಕಾರಿಯು ತಮ್ಮ ತಮ್ಮ ಕ್ಷೇತ್ರ ವ್ಯಾಪ್ತಿಗೆ ಬರುವ ಎಲ್ಲಾ ಕೆಲಸವನ್ನು ಕಟ್ಟು ನಿಟ್ಟಾಗಿ ಮಾಡಿ, ಪ್ರತಿಯೊಂದು ಹಂತದಲ್ಲಿಯೂ ಅಭಿವೃದ್ಧಿ ಮಾಡಬೇಕು ಎಂದರು.

ಈ ಬಾರಿಯ ದಸರಾ ಹಬ್ಬಕ್ಕೂ ಮೊದಲೇ ನಗರವನ್ನು ಸ್ವಚ್ಛ ಮಾಡುವುದರ ಮೂಲಕ ಮೈಸೂರಿಗೆ ಬಂದಂತಹ ಪ್ರವಾಸಿಗರು ಹಾಗೂ ಸಾರ್ವಜನಿಕರಿಗೆ ಮುಜುಗರವಾಗದಂತೆ ನೋಡಿಕೊಳ್ಳಬೇಕು ಎಂದರು.

ಸಭೆಯಲ್ಲಿ ಮಹಾನಗರ ಪಾಲಿಕೆಯ ಆಯುಕ್ತರಾದ ಎನ್.ಎನ್.ಮಧು, ಮೂಡಾ ಆಯುಕ್ತರಾದ ದಿನೇಶ್, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಿಂಧು, ಹೆಚ್ಚುವರಿ ಆಯುಕ್ತರಾದ ಕುಸುಮಾ ಕುಮಾರಿ, ಮಹಾನಗರ ಪಾಲಿಕೆ ಆರೋಗ್ಯಾಧಿಕಾರಿ ಮೆಕಟೇಶ್ ಸೇರಿದಂತೆ ಮಹಾನಗರ ಪಾಲಿಕೆ ಎಇ, ಎಇಇ ಹಾಗೂ ಇಂಜಿನಿಯರ್‌ಗಳು ಉಪಸ್ಥಿತರಿದ್ದರು.

ಅತಿಹೆಚ್ಚು ತಾಪಮಾನ: ಪ್ರತಿಕೂಲ ಪರಿಣಾಮ ಎದುರಿಸಲು ಮುನ್ನೆಚ್ಚರಿಕೆ ವಹಿಸಿ

ಚಾಮರಾಜನಗರ: ಜಿಲ್ಲೆಯಲ್ಲಿ ಅತೀ ಹೆಚ್ಚು ತಾಪಮಾನ ಪರಿಣಾಮವನ್ನು ಕಡಿಮೆ ಮಾಡಲು ಸಾರ್ವಜನಿಕರಿಗೆ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದ್ದು, ಎಲ್ಲಾ ಗ್ರಾಮ ಪಂಚಾಯತಿಗಳು, ರೈತ ಸಂಪರ್ಕ ಕೇಂದ್ರಗಳು, ಕೃಷಿ ಉತ್ಪನ್ನ ಮಾರುಕಟ್ಟೆಗಳು, ಜಾನುವಾರು ಸಂತೆಗಳಲ್ಲಿ ಹಾಗೂ ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಮೂಡಿಸಬೇಕಾಗಿದೆ. ಈ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಬಿಸಿಲಿನ ಅತೀ ಹೆಚ್ಚು ತಾಪಮಾನದಿಂದ ಉಂಟಾಗುವ ಅನಾರೋಗ್ಯವನ್ನು ತಡೆಗಟ್ಟಲು ಸಾಮಾನ್ಯ ನಿಯಮಗಳನ್ನು ಅನುಸರಿಸುವಂತೆ ಜಿಲ್ಲಾಡಳಿತ ತಿಳಿಸಿದೆ.

ಸಾಧ್ಯವಾದಷ್ಟು ಮಟ್ಟಿಗೆ ವಿಶೇಷವಾಗಿ ಗರಿಷ್ಠ ತಾಪಮಾನದ ಅವಧಿಯಲ್ಲಿ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸಬೇಕು. (ಮಧ್ಯಾಹ್ನ 12 ರಿಂದ 3 ರವರೆಗೆ). ಕಾಲಕಾಲಕ್ಕೆ ಸಾಕಷ್ಟು ನೀರು ಕುಡಿಯಬೇಕು. ಹಗುರವಾದ, ತಿಳಿ ಬಣ್ಣದ ಸಡಿಲವಾದ ಮತ್ತು ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಿಸಿಲಿನಲ್ಲಿ ಹೋಗುವಾಗ ರಕ್ಷಣೆಗಾಗಿ ಕನ್ನಡಕ, ಛತ್ರಿ, ಟೋಪಿ, ಪಾದರಕ್ಷೆ ಅಥವಾ ಚಪ್ಪಲಿಗಳನ್ನು ಬಳಸಬೇಕು. ಹೊರಗಿನ ಉಷ್ಣತೆಯು ಅಧಿಕವಾಗಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಬೇಕು. (ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ). ಪ್ರಯಾಣಿಸುವಾಗ ನೀರನ್ನು ಜೊತೆಯಲ್ಲಿ ಒಯ್ಯಬೇಕು. ದೇಹವನ್ನು ನಿರ್ಜಲೀಕರಣಗೊಳಿಸುವ ಆಲೋಹಾಲ್, ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು ತಪ್ಪಿಸಬೇಕು. ಸಾಧ್ಯವಾದಷ್ಟು ಬಿಸಿ ಆಹಾರವನ್ನು ಸೇವಿಸಬೇಕು. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಬಿಡಬಾರದು. ಮೂರ್ಛೆ ಅಥವಾ ಅನಾರೋಗ್ಯ ಅನಿಸಿದರೆ ತಕ್ಷಣ ವೈದ್ಯರನ್ನು ಭೇಟಿ ಮಾಡಬೇಕು. ನಿಂಬೆ ನೀರು, ಮಜ್ಜಿಗೆ ಇತ್ಯಾದಿ ಮನೆಯಲ್ಲಿ ತಯಾರಿಸಿದ ಪಾನೀಯಗಳು ಮತ್ತು ಒ.ಆರ್.ಎಸ್ ಅನ್ನು ಬಳಸಬೇಕು.

ಸಾಕುಪ್ರಾಣಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ಒದಗಿಸಬೇಕು. ಮನೆಯನ್ನು ತಂಪಾಗಿರಿಸಲು ಪರದೆಗಳು, ಶಟರ್ ಗಳು ಅಥವಾ ಸನ್‌ಶೇಡ್‌ಗಳನ್ನು ಬಳಸಬೇಕು ಹಾಗೂ ಆಗಿಂದ್ದಾಗ್ಗೆ ತಣ್ಣೀರು ಸ್ನಾನ ಮಾಡಬೇಕು. ಹೊರಗೆ ಹೋಗುವಾಗ ನೀರಿನ ಬಾಟಲ್, ಛತ್ರಿ, ಟೋಪಿ ಅಥವಾ ಕ್ಯಾಪ್, ಹೆಡ್‌ಕವರ್, ಹ್ಯಾಂಡ್ಲಾವರ್, ಹ್ಯಾಂಡ್ಲಾನ್, ಎಲ್‌ಕ್ಟ್ರೋಲೈಟ್, ಗ್ಲೂಕೋಸ್, ಒಆರ್‌ಎಸ್ ಅನ್ನು ಒಳಗೊಂಡಿರುವ ಅತೀ ಹೆಚ್ಚು ತಾಪಮಾನವನ್ನು ತಡೆಗಟ್ಟುವ ಕಿಟ್‌ಗಳನ್ನು ಒಯ್ಯಲು ನಾಗರಿಕರನ್ನು ಪ್ರೋತ್ಸಾಹಿಸಬೇಕು.

ಅತೀ ಹೆಚ್ಚು ತಾಪಮಾನದಿಂದ ಸಾಮಾನ್ಯವಾಗಿ ನಿರ್ಜಲೀಕರಣ, ಶಾಖ ಸೆಳೆತ, ಶಾಖದ ಬಳಲಿಕೆ ಮತ್ತು ಶಾಖದ ಆಘಾತದಂತಹ (ಸನ್‌ಸ್ಟ್ರೋಕ್) ಆರೋಗ್ಯದ ದುಷ್ಪರಿಣಾಮಗಳು ಉಂಟಾಗುವ ಸಾಧ್ಯತೆ ಇದ್ದು, ಅವುಗಳ ರೋಗ ಲಕ್ಷಣಗಳಾದ ಶಾಖ ಸೆಳೆತಗಳು ಎಡೆಗಾಲ ಮತ್ತು ಮೂರ್ಛೆ, ಸಾಮಾನ್ಯವಾಗಿ 39 ಡಿಗ್ರಿ ಸೆಲ್ಸಿಯಸ್ ಅಂದರೆ 102 ಡಿಗ್ರಿಗಿಂತ ಕಡಿಮೆ ಜ್ವರದಿಂದ ಕೂಡಿರುತ್ತದೆ. ಶಾಖದ ಬಳಲಿಕೆ, ಆಯಾಸ, ದೌರ್ಬಲ್ಯ, ತಲೆ ತಿರುಗುವಿಕೆ, ತಲೆ ನೋವು, ವಾಕರಿಕೆ, ವಾಂತಿ, ಸ್ನಾಯು ಸೆಳೆತ ಮತ್ತು ಬೆವರು ವುದು. ಶಾಖಾಘಾತ (ಸನ್‌ಸ್ಟ್ರೋಕ್) ದೇಹದ ಉಷ್ಣತೆಯು 40 ಡಿಗ್ರಿ ಸೆಲ್ಸಿಯಸ್ ಅಂದರೆ 104 ಡಿಗ್ರಿ ಅಥವಾ ಅದಕ್ಕಿಂತ ಹೆಚ್ಚಾಗುವುದು ಹಾಗೂ ಉಸಿರಾಟದಲ್ಲಿ ವ್ಯತ್ಯಯ ಮತ್ತು ಪ್ರಜ್ಞೆ ತಪ್ಪುವುದು.

ಅತೀ ಹೆಚ್ಚು ತಾಪಮಾನದಿಂದ ತುತ್ತಾದ ವ್ಯಕ್ತಿಯನ್ನು ನೆರಳಿನ ಆಡಿಯಲ್ಲಿ ತಂಪಾದ ಸ್ಥಳಕ್ಕೆ ಸ್ಥಳಾಂತರಿಸಬೇಕು. ಒದ್ದೆಯಾದ ಬಟ್ಟೆಯಿಂದ ಮೈ ಒರಸಬೇಕು. ತಂಪಾದ ಒದ್ದೆ ಬಟ್ಟೆಯನ್ನು ಹಾಕಬೇಕು ಹಾಗೂ ದೇಹದ ಉಷ್ಣತೆಯನ್ನು ತಗ್ಗಿಸಲು ತಲೆಯ ಮೇಲೆ ನೀರನ್ನು ಹಾಕಬೇಕು. ನೀರು ಅಥವಾ ಪುನರ್‌ಜಲೀಕರಣ ಪಾನೀಯಗಳಾದ ಒಆರ್‌ಎಸ್, ನಿಂಬೆ ಪಾನಕ ನೀಡಬೇಕು. (ವ್ಯಕ್ತಿ ಇನ್ನೂ ಪ್ರಜ್ಞೆ ಹೊಂದಿದ್ದರೆ) ವ್ಯಕ್ತಿಗೆ ತಂಪಾದ ಗಾಳಿಯ ವ್ಯವಸ್ಥೆ ಮಾಡಬೇಕು. ಉತ್ತಮ ಗಾಳಿಗಾಗಿ ಬಟ್ಟೆಗಳನ್ನು ಸಡಿಲಗೊಳಿಸಬೇಕು. ರೋಗ ಲಕ್ಷಣಗಳು ಉಲ್ಬಣಗೊಂಡರೆ ಅಥವಾ ದೀರ್ಘಕಾಲ ದವರೆಗೆ ಇದ್ದರೆ ಅಥವಾ ವ್ಯಕ್ತಿಯ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರೆ ವೈದ್ಯರನ್ನು ಕೂಡಲೇ ಸಂಪರ್ಕಿಸಬೇಕು. ಮದ್ಯಪಾನ, ಕಾಫಿ, ಶೇಖರಿಸಿದ ಪಾನೀಯವನ್ನು ನೀಡಬಾರದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ 20ರಂದು ವಿ.ಶ್ರೀನಿವಾಸಪ್ರಸಾದ್ ನುಡಿನಮನ ಕಾರ್ಯಕ್ರಮ

ಜಾತ್ಯಾತೀತ, ಪಕ್ಷಾತೀತವಾಗಿ ಕಾರ್ಯಕ್ರಮ ಮಾಡಲು ಸಭೆ ನಿರ್ಧಾರ



ಚಾಮರಾಜನಗರ: ಮಾಜಿ ಕೇಂದ್ರ ಸಚಿವ, ಹಾಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರ ನಿಧನದ ಗೌರವಾರ್ಥ ಮೇ.20 ರಂದು ಜಿಲ್ಲಾ ಕೇಂದ್ರದಲ್ಲಿ ನುಡಿನಮನ ಕಾರ್ಯಕ್ರಮ ಮಾಡಲು ತೀರ್ಮಾನಿಸಲಾಯಿತು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ವಿ.ಶ್ರೀನಿವಾಸಪ್ರಸಾದ್ ಅಭಿಮಾನಿಗಳ ಬಳಗದ ವತಿಯಿಂದ ನಡೆದ ಅವರ ನುಡಿನಮ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–4 | 04–05–2024

ತುಮಕೂರು– ಚಾಮರಾಜನಗರ

ಹೆದ್ದಾರಿಯಲ್ಲಿ ಕಬ್ಬು ವಸೂಲಿ: ಲಾರಿ ತಡೆದು ಆನೆ ರಂಪಾಟ

ಚಾಮರಾಜನಗರ: ಕಬ್ಬು ತುಂಬಿದ್ದ ಲಾರಿಯೊಂದನ್ನು ಅಡ್ಡ ಹಾಕಿ ಆನೆಯೊಂದು ಕಬ್ಬು ಕಿತ್ತು ತಿಂದು ಘಟನೆ ಚಾಮರಾಜನಗರ ಗಡಿಭಾಗವಾದ ಆಸನೂರಿನಲ್ಲಿ ಶುಕ್ರವಾರ ಬೆಳಿಗ್ಗೆ ನಡೆದಿದೆ.

ಈಗಾಗಲೇ ಟ್ರಾಫಿಕ್ ನಲ್ಲಿ ನಲುಗಿದ್ದ ವಾಹನ ಸವಾರರು ಆನೆ ಅಡ್ಡ ಹಾಕಿದ ಬಳಿಕ ಮತ್ತಷ್ಟು ಪರದಾಡಿದ್ದಾರೆ. ರಸ್ತೆ ಬದಿ ನಿಂತಿದ್ದ ಆನೆ ಕಬ್ಬು ತುಂಬಿದ್ದ ಲಾರಿ ಕಂಡಿದ್ದೇ ತಡ ಓಡೋಡಿ ಬಂದು ಕಬ್ಬಿಗೆ ಬಾಯಿ ಹಾಕಿದೆ.

ಆನೆ ಅಡ್ಡ ಹಾಕುತ್ತಿದ್ದಂತೆ ಲಾರಿ ನಿಲ್ಲಿಸಿದ ಚಾಲಕ ಬಳಿಕ ಸ್ವಲ್ಪ ಸಮಯದ ನಂತರ ಲಾರಿ ಚಲಾಯಿಸಿದ್ದಾನೆ.

ಇನ್ನು, ವೀಡಿಯೋವನ್ನು ಬಸ್ ನಲ್ಲಿದ್ದ ವ್ಯಕ್ತಿಯೊಬ್ಬರು ಸೆರೆ ಹಿಡಿದಿದ್ದಾರೆ. ಬೆಂಗಳೂರು– ದಿಂಡಿಗಲ್ ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ಆನೆ ದಾಂಧಲೆ ಸಾಮಾನ್ಯವಾಗಿದೆ.



ಗೋಶಾಲೆಗಳಿಗೆ ನಿರಂತರವಾಗಿ ಮೇವು ಪೂರೈಕೆ ಮಾಡಬೇಕು: ಶಿಲ್ಪನಾಗ್ ಸೂಚನೆ

ಚಾಮರಾಜನಗರ: ಹನೂರು ತಾಲೂಕು ವ್ಯಾಪ್ತಿಯಲ್ಲಿ ತೆರೆದಿರುವ ಗೋಶಾಲೆಗಳಲ್ಲಿ ನಿರಂತರವಾಗಿ ಮೇವು ಪೂರೈಕೆ ಮಾಡಬೇಕು ಹಾಗೂ ಜಾನುವಾರುಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿ ಸಿಟಿ ಶಿಲ್ಪನಾಗ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹನೂರು ಪಟ್ಟಣದ ಲೋಕೋಪಯೋಗಿ ವಸತಿಗೃಹದಲ್ಲಿ ಕರೆಯಲಾಗಿದ್ದ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕು ವ್ಯಾಪ್ತಿಯಲ್ಲಿ ತೆರೆದಿರುವ ಗೋಶಾಲೆಗಳಲ್ಲಿ ಕಳೆದ ಒಂದು ವಾರದಿಂದ ಮೇವು ಪೂರೈಕೆ ಮಾಡುತ್ತಿಲ್ಲ ಎಂದು ದೂರು ಬರುತ್ತಿದೆ. ಯಾವುದೇ ಕಾರಣಕ್ಕೂ ಜಾನುವಾರುಗಳಿಗೆ ಮೇವು ಕೊಡುವುದನ್ನು ನಿಲ್ಲಿಸಬಾರದು. ಮೇವು ನೀಡದಿದ್ದರೆ ಜಾನುವಾರುಗಳು ಬದುಕುವುದಾದರು ಹೇಗೆ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಇನ್ನು ಗೋಶಾಲೆಗಳು ತೆರೆದಿರುವ ಕಡೆ ಕುಡಿಯುವ ನೀರಿನ ಸಮಸ್ಯೆಗಳಿದ್ದರೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿಯವರು ಕುಡಿಯುವ ನೀರಿನ ಪೂರೈಕೆ ಮಾಡಬೇಕು. ಇದು ಕೇವಲ ಪಶುಪಾಲನೆ ಇಲಾಖೆಗೆ ಸಂಬಂಧಿಸಿದಲ್ಲ ಎಲ್ಲಾ ಇಲಾಖೆಯ ಅಧಿಕಾರಿಗಳು ಸಮನ್ವಯ ಸಾಧಿಸಬೇಕು ಎಂದರು.

ಇದೆ ವೇಳೆ ಪಶು ವೈದ್ಯಾಧಿಕಾರಿ ಡಾ. ಸಿದ್ದರಾಜು ಮಾತನಾಡಿ ಈಗಾಗಲೇ ತೆರೆದಿರುವ ಗೋಶಾಲೆ ಗಳಿಗೆ ಪ್ರತಿ ದಿನಕ್ಕೆ ಸುಮಾರು 60 ಟನ್‌ಗಳು ಮೇವು ಅಗತ್ಯ ವಿದೆ. ಈಗ ಹೆಚ್ಚಾಗಿ ಬೇಡಿಕೆ ಬರುತ್ತಿರುವುದರಿಂದ ಸುಮಾರು 75 ಟನ್ ಅವಶ್ಯಕತೆ ಇದೆ ಎಂದು ಮಾಹಿತಿ ನೀಡಿದರು.



ಈ ವೇಳೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಗಳು ಸುಮಾರು 15 ದಿನಗಳಿಗೆ ಆಗುವಷ್ಟು ಮೇವನ್ನು ಸಂಗ್ರಹಿಸಿಕೊಳ್ಳ ಸ್ಥಳೀಯವಾಗಿ ಹಸಿ ಮೇವು ಸಿಗುತ್ತಿದ್ದರೆ ಇಲ್ಲಿಯೇ ಹಸಿರು ಮೇವನ್ನು ಖರೀದಿ ಮಾಡಿ ರೈತರಿಗೆ ವಿತರಿಸಿ ಇದರಿಂದ ಜಾನುವಾರು ಗಳಿಗೂ ಸಹ ಅನುಕೂಲವಾಗಲಿದೆ. ಇದಕ್ಕೆ ಯಾವುದೇ ಟೆಂಡರ್ ಅವಶ್ಯಕತೆ ಇಲ್ಲ ಎಂದರು.

ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆ ಯಲ್ಲಿ ಕಮಿಟಿ ರಚನೆ ಮಾಡಿಕೊಂಡು ಹನೂರು ಪಟ್ಟಣದಲ್ಲಿ ಆದಷ್ಟು ಬೇಗ ಮೇವು ಬ್ಯಾಂಕ್ ತೆರೆದು ರೈತರಿಗೆ ಮೇವು ಪೂರೈಕೆ ಮಾಡಬೇಕು ಎಂದು ತಿಳಿಸಿದರು.

ಯಾವುದೇ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗಬಾರದು: ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮಗಳಿಂದ ಪ್ರತಿದಿನ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಹಲವಾರು ದೂರುಗಳು ಬರುತ್ತಿದೆ. ಈ ಬಗ್ಗೆ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು. ಈ ನಿಟ್ಟಿನಲ್ಲಿ ಪ್ರತಿಯೊಂದು ಗ್ರಾಮ ಪಂಚಾಯಿತಿಯ ಪಿಡಿಒಗಳು ಕೇಂದ್ರ ಸ್ಥಾನದಲ್ಲಿಯೇ ಇದ್ದು ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಪಟ್ಟಮಾಡಿ ಸಮಸ್ಯೆ ಬಗೆಹರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಪ್ರತಿಯೊಂದು ಪಂಚಾಯತಿಗಳಲ್ಲಿ ಲ್ಯಾಂಡ್ ಲೈನ್ ಫೋನ್ ಗಳು ಸರಿಯಾಗಿ ನಿರ್ವಹಿಸುವಂತೆ ಕ್ರಮ ಕೈಗೊಂಡು ಪ್ರತಿಯೊಂದು ಸಮಸ್ಯೆಗೂ ಪರಿಹಾರ ಒದಗಿಸಬೇಕು ಇಲ್ಲದಿದ್ದರೆ ಸಂಬಂಧಪಟ್ಟ ವಿಡಿಯೋಗಳ ಮೇಲೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಇನ್ನು ಮಳೆಗಾಲ ಪ್ರಾರಂಭವಾಗುವವರೆಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕೆರೆಗಳನ್ನು ನರೇಗಾ ಯೋಜನೆಯಡಿ ಅಭಿವೃದ್ಧಿಪಡಿಸಿಕೊಳ್ಳಬೇಕು. ಮಳೆಯ ನೀರನ್ನು ಕೆರೆಗಳಲ್ಲಿ ಸಂಗ್ರಹಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಇಲ್ಲದಿದ್ದರೆ ಮುಂದಿನ ವರ್ಷವೂ ಮಳೆ ಬಾರದಿದ್ದರೆ ಸಮಸ್ಯೆಯಾಗುತ್ತದೆ ಎಂದು ತಿಳಿಸಿದರು.

ಹನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ 13 ವಾರ್ಡ್‌ಗಳ ಪೈಕಿ ಸುಮಾರು ನಾಲ್ಕರಿಂದ ಐದು ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು ಇದನ್ನು ಬಗೆಹರಿಸುವ ನಿಟ್ಟಿನಲ್ಲಿ ಕ್ರಮ ಕೈಗೊಂಡಿರುವಾಗಿ ಪ್ರಭಾರ ಮುಖ್ಯಾಧಿಕಾರಿ ಮಹೇಶ್ ಕುಮಾರ್ ಮಾಹಿತಿ ನೀಡಿದರು.

ಇಒ ಉಮೇಶ್ ಮಾತನಾಡಿ ಹನೂರು ತಾಲೂಕು ವ್ಯಾಪ್ತಿಯಲ್ಲಿ ಸುಮಾರು 30 ಗ್ರಾಮಗಳಲ್ಲಿ ಅಂತರ್ಜಲ ಮಟ್ಟ ಕಡಿಮೆಯಾಗಿರುವುದರಿಂದ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಇದಲ್ಲದೆ ಖಾಸಗಿ ಬೋರ್ ಗಳ ಮೂಲಕವೂ ಕುಡಿಯುವ ನೀರಿನ ಪೂರೈಕೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಜನರಿಗೆ ಜಾಗೃತಿ ಮೂಡಿಸಿ: ತಾಲೂಕು ವ್ಯಾಪ್ತಿಯಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿರುವುದರಿಂದ ಹಲವು ಆರೋಗ್ಯ ಸಮಸ್ಯೆಗಳು ಕಂಡುಬರುತ್ತಿದೆ. ಬಿಸಿಲಿನ ಬೇಳೆ ಗರ್ಭಿಣಿಯರು, ಬಾಣಂತಿಯರು, ವಯೋವೃದ್ಧರು, ಮಕ್ಕಳು ಹಾಗೂ ಅನಾರೋಗ್ಯ ಪೀಡಿತರು ಬಿಸಿಲಿಗೆ ಬಾರದಂತೆ ಜಾಗೃತಿ ಮೂಡಿಸಬೇಕು ಪ್ರತಿಯೊಬ್ಬರು ಹೆಚ್ಚು ನೀರನ್ನು ಕುಡಿಯಬೇಕು, ದ್ರವ ಪದಾರ್ಥಗಳನ್ನು ಹೆಚ್ಚು ಸೇವಿಸುವಂತೆ ಮನವರಿಕೆ ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಕೆಲವು ಶಾಲಾ ಕಾಲೇಜು ಗಳಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕ ವ್ಯವಸ್ಥೆ ಕಲ್ಪಿಸದೆ ಜಾನುವಾರುಗಳಂತೆ ಕೂರಿಸುತ್ತಿದ್ದಾರೆ. ಇದಲ್ಲದೆ ಕಡ್ಡಾಯವಾಗಿ ಟೈ ಹಾಕಿಕೊಳ್ಳಬೇಕು ಎಂಬುದು ಸೇರಿದಂತೆ ಇನ್ನಿತರ ನಿಬಂಧನೆಗಳನ್ನು ಸಡಿಲಗೊಳಿಸ ಬೇಕು ಎಂದು ಮನವಿ ಮಾಡಿದ್ದಾರೆ. ನಾನು ಇಂದೇ ಆದೇಶ ಮಾಡುತ್ತೇನೆ, ಪ್ರತಿಯೊಂದು ಖಾಸಗಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ಕಡ್ಡಾಯವಾಗಿ ವಿದ್ಯಾರ್ಥಿಗಳಿಗೆ ಫ್ಯಾನ್ ವ್ಯವಸ್ಥೆ ಇರಬೇಕು, ಕಿಟಕಿಗಳನ್ನು ಸರಿಯಾಗಿ ಇಟ್ಟುಕೊಳ್ಳಲು ಗ್ರಾಮ ಪಂಚಾಯಿತಿಯವರು ಹಾಗೂ ಪಟ್ಟಣ ಪಂಚಾಯಿತಿಯವರು ಶಾಲೆಯ ಮುಖ್ಯಸ್ಥರಿಗೆ ತಿಳಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಕೊಳ್ಳೇಗಾಲ ಉಪ ವಿಭಾಗಾಧಿಕಾರಿ ಶಿವಮೂರ್ತಿ, ತಹಸೀಲ್ದಾರ್ ಗುರುಪ್ರಸಾದ್, ಇಒ ಉಮೇಶ್,ಎಇಇ ಹರೀಶ್, ಮಧುಸೂದನ್, ಉಪತಹಸಿಲ್ದಾರ್ ಸುರೇಖಾ, ಶಿರಸ್ತೆದಾರ್ ನಾಗೇಂದ್ರ, ಮಹದೇವ ನಾಯಕ, ಕಂದಾಯ ನಿರೀಕ್ಷಕ ಬಿಜಿ ಮಾದೇಶ್, ಗ್ರಾಮ ಆಡಳಿತಾಧಿಕಾರಿ ಶೇಷಣ್ಣ ಸೇರಿದಂತೆ ಇನ್ನಿತರರು ಹಾಜರಿದ್ದರು.

ಕೇಬಲ್ ಅಳವಡಿಕೆಗೆ ಅರ್ಜಿ ಸಲ್ಲಿಸಲು ಅವಕಾಶ

ತುಮಕೂರು: ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಾಲಿಕೆಗೆ ಸಂಬಂಧಿಸಿದ ಬೀದಿದೀಪ ಕಂಬಗಳ ಮೇಲೆ ಅನಧಿಕೃತವಾಗಿ ಕೇಬಲ್‌ಗಳನ್ನು ಅಳವಡಿಸಿರುವುದು ಕಂಡು ಬಂದಿದ್ದು, ಇದರಿಂದಾಗಿ ಸಾರ್ವಜನಿಕರ ಸುರಕ್ಷತೆಗೆ ತೊಂದರೆಯಾಗಿರುತ್ತದೆ. ಸದರಿ ಕೇಬಲ್‌ಗಳನ್ನು ಅಳವಡಿಸಿರುವವರು/ಏಜೆನ್ಸಿದಾರರು ಮೇ 10ರ ಒಳಗಾಗಿ ಅರ್ಜಿ ಸಲ್ಲಿಸಿ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಅನುಮತಿ ಪಡೆಯಲು ಸೂಚಿಸಿದೆ. ತಪ್ಪದ್ದಲ್ಲಿ ಪಾಲಿಕೆಯಿಂದ ಮುಂದಿನ ಸೂಕ್ತ ಕ್ರಮ ವಹಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವ್ಯಕ್ತಿ ನಾಪತ್ತೆ: ಪತ್ತೆಗಾಗಿ ಮನವಿ

ತುಮಕೂರು: ಬೆಳ್ಳಾವಿ ಪೊಲೀಸ್ ಠಾಣೆ ವ್ಯಾಪ್ತಿ ಕಳಸೇಗೌಡನಪಾಳ್ಯದ ಸುಮಾರು 24ವರ್ಷದ ಕೀರ್ತಿಪ್ರಸಾದ್ ಎಂಬ ವ್ಯಕ್ತಿಯು ತನ್ನ ಮನೆಯಿಂದ ಏಪ್ರಿಲ್ 29ರಂದು ಬೆಳಿಗ್ಗೆ 8.30 ಗಂಟೆ ಸಮಯದಲ್ಲಿ ತಮ್ಮ ಜಮೀನಿನ ಪಹಣಿಗಳನ್ನು ತರುವುದಾಗಿ ಹೇಳಿ ಹೋದವನು ವಾಪಸ್ ಮನೆಗೆ ಬಾರದೆ ನಾಪತ್ತೆಯಾಗಿದ್ದಾನೆ ಎಂದು ಈತನ ತಂದೆ ಶರತ್ ಕುಮಾರ್ ಠಾಣೆಗೆ ದೂರು ನೀಡಿದ್ದಾರೆ.

ಈತನು 5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಕಪ್ಪು ಮೈಬಣ್ಣ ಹೊಂದಿದ್ದು, ಗಾರೆ ಕೆಲಸ ಮಾಡುತ್ತಾನೆ. ಕಾಣೆಯಾದ ಸಂದರ್ಭ ಸಿಮೆಂಟ್ ಬಣ್ಣದ ಅರ್ಧ ತೋಳಿನ ಅಂಗಿ ಮತ್ತು ಕಪ್ಪು ಬಣ್ಣದ ಬರ್ಮುಡ ಧರಿಸಿದ್ದನು. ಈತನ ಬಗ್ಗೆ ಸುಳಿವು ಸಿಕ್ಕವರು ಮೊ.ಸಂ. 9480802950–31–20–00ಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಕರ್ನಾಟಕ– ತಮಿಳುನಾಡು ಗಡಿಯಲ್ಲಿ ಮೂರು ತಾಸು ಟ್ರಾಫಿಕ್ ಜಾಂ



ಚಾಮರಾಜನಗರ: ಅತಿಭಾರ ಹೊತ್ತ ವಾಹನಗಳಿಗೆ ತಮಿಳುನಾಡು ಅರಣ್ಯ ಇಲಾಖೆಯು ದಂಡ ವಿಧಿಸುತ್ತಿದ್ದು ಪ್ರತಿ ಲಾರಿ, ಟ್ರಕ್ ಗಳ ತೂಕ ಅಳೆಯುತ್ತಿರುವುದರಿಂದ ಕರ್ನಾಟಕ–ತಮಿಳುನಾಡು ಗಡಿಯಲ್ಲಿ ಕಿಮೀಗಟ್ಟಲೇ ಟ್ರಾಫಿಕ್ ಜಾಂ ಉಂಟಾಗಿದೆ.

ಬೆಂಗಳೂರು–ದಿಂಡಿಗಲ್ ರಾಷ್ಟ್ರೀಯ ಹೆದ್ದಾರಿ ಹಾದುಹೋಗುವ ಚಾಮರಾಜನಗರದ ಗಡಿಯಲ್ಲಿರುವ ಆಸನೂರಲ್ಲಿ ತಮಿಳುನಾಡಿನ ಅರಣ್ಯ ಇಲಾಖೆಯು ಅತಿಭಾರ ಹೊತ್ತ ವಾಹನಗಳಿಗೆ ದಂಡ ವಿಧಿಸುತ್ತಿರುವ ಹಿನ್ನೆಲೆ ಉಳಿದ ವಾಹನಗಳಾದ ಬಸ್, ಕಾರು, ಬೈಕ್ ಸವಾರರು ಗಂಟೆಗಟ್ಟಲೇ ಟ್ರಾಫಿಕ್ ಜಾಂನಲ್ಲಿ ಸಿಲುಕಿದ್ದಾರೆ.

ದಿಂಬಂ ಘಟ್ಟ ಪ್ರದೇಶದಲ್ಲಿ ಸರಕು ತುಂಬಿದ ವಾಹನಗಳು 16 ಟನ್ ಅಷ್ಟೇ ಹೊತ್ತು ಸಾಗಬೇಕು ಎಂದು ಹೈಕೋರ್ಟ್ ಆದೇಶ ಹಿನ್ನೆಲೆ ಗಡಿಯಲ್ಲಿ ಸರಕುಗಳ ತೂಕ ಪರೀಕ್ಷಿಸಿ ಅನುಮತಿ ನೀಡುತ್ತಿರುವ ಹಿನ್ನೆಲೆ ಉಳಿದ ವಾಹನಗಳು ಕಿಮೀಗಟ್ಟಲೇ ಟ್ರಾಫಿಕ್ ನಲ್ಲಿ ಸಿಲುಕುವಂತಾಗಿದೆ.

6 ಮತ್ತು 10 ಚಕ್ರದ ಲಾರಿಗಳು, ಟ್ರಕ್ ಗಳು ಕೇವಲ 16.2 ಟನ್ ನಷ್ಟು ಮಾತ್ರ ಸರಕು ತುಂಬಿ ಸಾಗಾಟ ನಡೆಸಬಹುದಾಗಿದೆ. ಆದರೆ, ಬಹುತೇಕ ಲಾರಿಗಳು 20–25 ಟನ್ ನಷ್ಟು ತೂಕ ಹೊತ್ತು ಸಾಗುತ್ತಿದುದು ಕಂಡುಬಂದಿದ್ದರಿಂದ ಅರಣ್ಯ ಇಲಾಖೆ ಈ ಕ್ರಮ ತೆಗೆದುಕೊಂಡಿದೆ.

ಒಟ್ಟಿನಲ್ಲಿ ಅಂಬುಲೆನ್ಸ್‌ಗಳು ಸೇರಿದಂತೆ ಹಲವು ವಾಹನಗಳು ಕಿಮೀಗಟ್ಟಲೇ ನಿಂತು ಕರ್ನಾಟಕ–ತಮಿಳುನಾಡು ಗಡಿಯಲ್ಲಿ ನಿಂತು ಫಜೀತಿ ಅನುಭವಿಸುವಂತಾಗಿದೆ.

ಕೆಎಸ್ಆರ್‌ಟಿಸಿ ಬಸ್ ನಿಲ್ದಾಣ ನಿರ್ಮಾಣ: ತಿಂಗಳಾಂತ್ಯಕ್ಕೆ ಪೂರ್ಣಗೊಳಿಸಲು ಸೂಚನೆ

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಪರಿಶೀಲನೆ

ತುಮಕೂರು: ನಗರದಲ್ಲಿ ನಿರ್ಮಾಣ ವಾಗಿರುವ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಕಾಮಗಾರಿಯನ್ನು ಮೇ ಮಾಹೆ ಅಂತ್ಯಕ್ಕೆ ಪೂರ್ಣಗೊಳಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಕೆಎಸ್ ಆರ್‌ಟಿಸಿ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಶುಕ್ರವಾರ ಸಂಜೆ ದೇವರಾಜ ಅರಸು ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು, ಕೆಎಸ್‌ಆರ್‌ಟಿಸಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತ್ರಿವೇಣಿ ಅವರಿಂದ ಕಾಮಗಾರಿ ಪ್ರಗತಿ ಮಾಹಿತಿ ಪಡೆದರು.

ನಂತರ ಮಾತನಾಡಿದ ಜಿಲ್ಲಾಧಿಕಾರಿ ಗಳು ಹಗಲಿರುಳು ಕೆಲಸಗಾರರನ್ನು ಪಾಳಿ ಆಧಾರದ ಮೇಲೆ ನಿಯೋಜಿಸಿ ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದ ತ್ರಿವೇಣಿ ಲಿಫ್ಟ್ ಕಾರ್ಯಾಚರಣೆ, ಫ್ಲೂಂಬಿಂಗ್ ಕೆಲಸ, ಮುಂಭಾಗದ ಆವರಣ ಗೋಡೆ, ಶೌಚಾಲಯ, ವಿದ್ಯುತ್ ಸಂಪರ್ಕ, ಫಾಲ್ ಸೀಲಿಂಗ್, ಸೈನ್ ಬೋರ್ಡ್, ಸಿಸಿಟಿವಿ ಕ್ಯಾಮೆರಾ, ಅಗ್ನಿಶಾಮಕ ಯಾಂತ್ರಿಕ ಕೆಲಸ, ಹೊರ ಹೋಗುವ ಹಾಗೂ ಒಳ ಬರುವ ಮಾರ್ಗ ನಿರ್ಮಾಣ, ಲ್ಯಾಂಡ್ ಸ್ಕೇಪಿಂಗ್ ಕೆಲಸ, ಅಂತಿಮ ಕೋಟ್ ಪೇಂಟ್, ರ‍್ಯಾಂಪ್ ಕೆಲಸ, ಸ್ಟಕ್ಚರಲ್ ಮೆರುಗು ಕೆಲಸ, ಟಿಸಿ ಪಾಯಿಂಟ್ ಮತ್ತು ಪೊಲೀಸ್ ಚೌಕಿ ನಿರ್ಮಾಣ ಕಾಮಗಾರಿಗಳು ಬಾಕಿ ಇದ್ದು, ಮೇ 30ರೊಳಗಾಗಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ಕೆಎಸ್‌ಆರ್‌ಟಿಸಿ ಹಾಗೂ ಸ್ಮಾರ್ಟ್ ಸಿಟಿ ಅಧಿಕಾರಿ ಸಿಬ್ಬಂದಿಗಳು ಹಾಜರಿದ್ದರು.

ಇಂಡಿಯಾ ಬುಕ್ ರೆಕಾರ್ಡ್ ಸೇರಿದ ಬಂಡೀಪುರದ ವಿಶಿಷ್ಟ ಕಾರ್ಯಕ್ರಮ ಯುವಮಿತ್ರ

ಗುಂಡ್ಲುಪೇಟೆ: ಭಾರತದ ಜನಪ್ರಿಯ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಒಂದಾದ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶಕ್ಕೆ ಮತ್ತೊಂದು ಗೌರವದ ಗರಿ ಬಂದಿದ್ದು, ಬಂಡೀಪುರ ಅರಣ್ಯ ಇಲಾಖೆ ಹಮ್ಮಿಕೊಂಡಿದ್ದ ಕಾರ್ಯಕ್ರಮಕ್ಕೆ ಇಂಡಿಯಾ ಬುಕ್ ಆಫ್ ರೆಕಾರ್ಡ್ ಗೌರವ ಸಂದಿದೆ.

ವಿದ್ಯಾರ್ಥಿಗಳಿಗೆ ಕಾಡಿನ ಬಗ್ಗೆ ಅರಿವು, ಅರಣ್ಯದ ಬಗ್ಗೆ ಜಾಗೃತಿ, ಪರಿಸರ ರಕ್ಷಣೆ ಪ್ರಾಮುಖ್ಯತೆ ಬಗ್ಗೆ ತಿಳಿಸಿಕೊಡಲು ಆರಂಭಿಸಿದ್ದ ಯುವಮಿತ್ರ ಕಾರ್ಯಕ್ರಮಕ್ಕೆ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಗೌರವ ಸಂದಿದೆ.

ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಆಸಕ್ತಿಹೊಂದಿರುವ ಇಂಥ ಮಕ್ಕಳಿಗೆ ಅರಣ್ಯ ಸಂರಕ್ಷಣೆ ಮಹತ್ವ ಅರಿತಿದ್ದಾರೆ.

ಇಂಡಿಯಾ ಬುಕ್ ಆಫ್ ರೆಕಾರ್ಡ್ ನಲ್ಲಿ ದಾಖಲಾಗಿದ್ದು ಪ್ರಮಾಣಪತ್ರವನ್ನು ವಿತರಿಸ ಲಾಗಿದೆ.

ಬಂಡೀಪುರ ಯುವ ಮಿತ್ರ ಜಾಗೃತಿ ಕಾರ್ಯಕ್ರಮದಲ್ಲಿ ಒಟ್ಟು 8410 ಮಂದಿ ಭಾಗಿಯಾಗಿದ್ದಾರೆ. ಸಫಾರಿ ವೀಕ್ಷಿಸಿ, ಕಾನನದ ಬಗ್ಗೆ ಮಾಹಿತಿ ತಿಳಿದುಕೊಳ್ಳುವ ಜೊತೆಗೆ ಅರಣ್ಯ ಸಂರಕ್ಷಣೆ ಮಹತ್ವ



8,410 ಮಂದಿಯಲ್ಲಿ 7,019 ವಿದ್ಯಾರ್ಥಿಗಳು, 655 ಶಿಕ್ಷಕರು, 197 ಗ್ರಾಮ ಪಂಚಾಯತಿ ಸಿಬ್ಬಂದಿ, ಸದಸ್ಯರು, 395 ಸ್ಥಳೀಯ ರೈತರು ಮತ್ತು 143 ಮಂದಿ ಗಿರಿಜನರಿದ್ದು 2023 ರ ಮಾ.3 ರಿಂದ 2024ರ ಮಾ. 8ರವರೆಗೆ 162 ಜಾಗೃತಿ ಕಾರ್ಯಕ್ರಮ ಆಯೋಜನೆ ಮಾಡ ಲಾಗಿದೆ.

2023ರಲ್ಲಿ ಆಂದಿನ ಬಂಡೀಪುರ ಸಿಎಸ್ ಆಗಿದ್ದ ಡಾ.ಪಿ.ರಮೇಶ್ ಕುಮಾರ್ ಅವರಿಂದ ಬಂಡೀಪುರ ಯುವ ಮಿತ್ರ ಎಂಬ ಕಾರ್ಯಕ್ರಮ ಜಾಲನೆ ಸಿಕ್ಕಿತ್ತು. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಸುವರ್ಣ ಮಹೋತ್ಸವದ ಅಂಗವಾಗಿ ಈ ಕಾರ್ಯಕ್ರಮ ರೂಪಿಸಿ ವಿದ್ಯಾರ್ಥಿ ಗಳಿಗೆ ಉಚಿತ ಸಫಾರಿ ಮಾಡಿಸಿ ಪ್ರಕೃತಿ ಶಿಕ್ಷಣ ನೀಡುವ ಕಾರ್ಯಕ್ರಮ ಇದಾಗಿದೆ.

ಬಂಡೀಪುರ ಯುವ ಮಿತ್ರ ಕಾರ್ಯ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–5 | 04–05–2024
ಹಾಸನ– ರಾಮನಗರ

ಕೃಷ್ಣಮ್ಮ ನಿಧನ

ವಿಜಯಪುರ: ಪಟ್ಟಣದ ಮಂಡಿಬೆಲೆ ರಸ್ತೆಯಲ್ಲಿ ವಾಸವಾಗಿರುವ ಪುರಸಭೆಯ ನೌಕರರಾದ (ಹೊಸಕೋಟೆ ಪುರಸಭೆ) ಲಕ್ಷ್ಮೀನಾರಾಯಣ ರವರ ತಾಯಿ ಕೃಷ್ಣಮ್ಮ(63) ಅವರು ಶುಕ್ರವಾರದಂದು ಅನಾರೋಗ್ಯ ನಿಮಿತ್ತ ನಿಧನರಾಗಿರುವರು.

ಮೃತರು ಓರ್ವ ಪುತ್ರ ಹಾಗೂ ಓರ್ವ ಪುತ್ರಿಯನ್ನು ಅಗಲಿದ್ದು ಮೃತರ ಅಂತ್ಯ ಸಂಸ್ಕಾರವನ್ನು ಶನಿವಾರದಂದು ಮಧ್ಯಾಹ್ನ 12 ಗಂಟೆಗೆ ಮೇಲೂರು ರಸ್ತೆಯಲ್ಲಿರುವ ಬಲಿಜ ಸಮುದಾಯದ ರುದ್ರಭೂಮಿಯಲ್ಲಿ ನಡೆಸಲಾಗುತ್ತದೆ.

ದಕ್ಷಿಣ ಶಿಕ್ಷಕರ ಮತಕ್ಷೇತ್ರದ ಮತದಾರ ಪಟ್ಟಿಗೆ ಅರ್ಜಿ ಸಲ್ಲಿಸಲು ಅವಕಾಶ

ಹಾಸನ: ಭಾರತ ಚುನಾವಣಾ ಆಯೋಗವು ದಕ್ಷಿಣ ಶಿಕ್ಷಕರ ಕ್ಷೇತ್ರಕ್ಕೆ ಚುನಾವಣೆ ನಡೆಸುವ ಬಗ್ಗೆದಿನಾಂಕ: 02/05/2024 ರಂದು ಪತ್ರಿಕಾ ಪ್ರಕಟಣೆ ಮೂಲಕ ಚುನಾವಣೆಯನ್ನು ಘೋಷಿಸಿರುತ್ತದೆ.ಕರ್ನಾಟಕ ವಿಧಾನ ಪರಿಷತ್ತಿನ ದಕ್ಷಿಣ ಶಿಕ್ಷಕರ ಮತಕ್ಷೇತ್ರದ ಅಂತಿಮ ಮತದಾರರ ಪಟ್ಟಿಯನ್ನು ಡಿಸೆಂಬರ್ 30 ರಂದು ಪ್ರಕಟಿಸಲಾಗಿರುತ್ತದೆ. ಜನವರಿ ತಿಂಗಳಿನಿಂದ ನಿರಂತರ ಪರಿಷ್ಕರಣೆ ಅಡಿಯಲ್ಲಿ ಅರ್ಜಿಗಳನ್ನು ದಿನಾಂಕ 06.05.2024 ರ ಸಂಜೆ 05.30 ಗಂಟೆಯವರೆಗೆ ಸ್ವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಅರ್ಹ ವ್ಯಕ್ತಿಯು, ನಮೂನೆ–19 ರ ಅರ್ಜಿಗಳನ್ನು ಜಿಲ್ಲೆಯ ತಾಲ್ಲೂಕು ಕಛೇರಿಗಳಿಂದ ಪಡೆದು ಸೂಕ್ತ ರೀತಿಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿದೆ.

ದಕ್ಷಿಣ ಶಿಕ್ಷಕರ ಮತಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ದಾಖಲು ಮಾಡಬಯಸುವ ವ್ಯಕ್ತಿಯು ಭಾರತದ ಪ್ರಜೆಯಾಗಿರತಕ್ಕದ್ದು, ಆಯಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರಬೇಕು. ಅರ್ಹತಾ ದಿನಾಂಕ:01/11/2023 ಕ್ಕೆ ಮೊದಲು ಆರುವರ್ಷದೊಳಗೆ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ದರ್ಜೆಯಲ್ಲಿ ನಿರ್ದಿಷ್ಟಪಡಿಸಿದಂಥ ರಾಜ್ಯದೊಳಗಿನ ಯಾವುದೇ ಅರ್ಹ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ ಮೂರು ವರ್ಷಗಳ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ಬೋಧಕರು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಜಿಪಂ ಮಾಜಿ ಸದಸ್ಯೆ ಮೇಲೆ 3 ವರ್ಷ ಅತ್ಯಾಚಾರ: ಪ್ರಜ್ವಲ್ ವಿರುದ್ಧ 2ನೇ ದೂರು ದಾಖಲು



ಹಾಸನ: ಹಾಸನ ಸಂಸದ ಪ್ರಜ್ವಲ್ ರೇವಣ್ಣಗೆ ಮತ್ತೊಂದು ಸಂಕಷ್ಟ ಎದುರಾಗಿದ್ದು, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯೆಯೊಬ್ಬರು ತಮ್ಮ ಮೇಲೆ ಪ್ರಜ್ವಲ್ ರೇವಣ್ಣ 3 ವರ್ಷ ಅತ್ಯಾಚಾರವೆಸಗಿದ್ದಾರೆ ಎಂದು ಆರೋಪಿಸಿ ದೂರು ದಾಖಲಿಸಿದ್ದಾರೆ.

ಸೆಕ್ಸ್ ಹಗರಣದಲ್ಲಿ ದೇಶಾದ್ಯಂತ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವ ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಇಂದು ಮತ್ತೊಂದು ಎಫ್ ಐಆರ್ ದಾಖಲಾಗಿದ್ದು, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯೆಯೊಬ್ಬರು ತಮ್ಮ ಮೇಲೆ ಪ್ರಜ್ವಲ್ ರೇವಣ್ಣ 3 ವರ್ಷ ಅತ್ಯಾಚಾರ ಮಾಡಿದ್ದಾರೆ ಎಂದು ಆರೋಪಿಸಿ ಸಿಐಡಿಗೆ ದೂರು ನೀಡಿದ್ದಾರೆ.

ಮೂಲಗಳ ಪ್ರಕಾರ ಸುಮಾರು 40 ವರ್ಷ ವಯಸ್ಸಿನ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯೆ ತಮ್ಮ ದೂರಿನಲ್ಲಿ ಪ್ರಜ್ವಲ್ ರೇವಣ್ಣ ತಮ್ಮ ಮೇಲೆ 3 ವರ್ಷಗಳ ಕಾಲ ನಿರಂತರವಾಗಿ ಅತ್ಯಾಚಾರ ಮಾಡಿದ್ದಾರೆ. ನಮ್ಮ ದೈಹಿಕ ಸಂಪರ್ಕದ ಸನ್ನಿವೇಶಗಳನ್ನು ತಮ್ಮ ಮೊಬೈಲ್‌ನಲ್ಲಿ ಸೆರೆ ಹಿಡಿದು ಅವುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಅಪ್ಲೋಡ್ ಮಾಡುವುದಾಗಿ ಹೇಳಿ ಬೆದರಿಸಿ ಪದೇ ಪದೇ ನನ್ನನ್ನು ಲೈಂಗಿಕವಾಗಿ ಬಳಸಿಕೊಳ್ಳುತ್ತಿದ್ದರು.

ಜನವರಿ 1, 2021 ಮತ್ತು ಏಪ್ರಿಲ್ 25, 2024ರ ನಡುವೆ ತನ್ನ ಮೇಲೆ ನಿರಂತರವಾಗಿ ಅತ್ಯಾಚಾರ ಮಾಡಿದ್ದು, ಲೈಂಗಿಕವಾಗಿ ಕಿರುಕುಳ ನೀಡಲಾಗಿದೆ ಎಂದು ಮಹಿಳೆ ಆರೋಪಿಸಿದ್ದಾರೆ. ಅಲ್ಲದೆ ಸಿಐಡಿ ಬಳಿ ಮೇ 1 ರಂದು ಪ್ರಕರಣ ದಾಖಲಿಸಿದ್ದು, ಈ ಮೂಲಕ ಪ್ರಜ್ವಲ್ ರೇವಣ್ಣ ವಿರುದ್ಧ 2ನೇ ಎಫ್ ಐಆರ್ ದಾಖಲಾದಂತಾಗಿದೆ.

ದೂರಿನಲ್ಲೇನಿದೆ: ಸಂತ್ರಸ್ಥೆ ನೀಡಿರುವ ದೂರಿನಲ್ಲಿ, 2021ರಲ್ಲಿ ಸರ್ಕಾರಿ ಐಟಿಐ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿನಿಯರಿಗೆ ಸೀಟು ಕೊಡಿಸಲು ತಾನು ಹಾಸನ ಸಂಸದ ಪ್ರಜ್ವಲ್ ರೇವಣ್ಣರನ್ನು ಭೇಟಿಯಾಗಲು ತೆರಳಿದ್ದೆ. ನಾನು ಸಂಸದ ಪ್ರಜ್ವಲ್ ರೇವಣ್ಣ ಕ್ವಾರ್ಟರ್ಸ್‌ನಲ್ಲಿ ಅವರನ್ನು ಭೇಟಿ ಮಾಡಿದ್ದೆ. ಪ್ರಜ್ವಲ್ ರೇವಣ್ಣ ಮೊದಲು ದಿನ ನನ್ನನ್ನು ಭೇಟಿ ಮಾಡಲಿಲ್ಲ. ಮರುದಿನ ಹಾಸನದ ಎಂಪಿ ನಿವಾಸಕ್ಕೆ ಪ್ರಜ್ವಲ್ ರೇವಣ್ಣ ತಮ್ಮನ್ನು ಕರೆಸಿಕೊಂಡಿದ್ದರು. ನೆಲ ಮಹಡಿಯಲ್ಲಿ ಹೆಚ್ಚಿನ ಜನ ಇದ್ದರಿಂದ ಮೇಲ್ಮಹಡಿಯಲ್ಲಿ ಕಾಯುವಂತೆ ಹೇಳಿದ್ದಾರೆ. ಮೇಲ್ಮಹಡಿಯಲ್ಲಿ ಇನ್ನೂ ಕೆಲ ಮಹಿಳೆಯರು ಇದ್ದಾರೆ ಅವರ ಜೊತೆ ಕಾಯುವಂತೆ ಪ್ರಜ್ವಲ್ ಹೇಳಿದ್ದಾರೆ.

ಸ್ವಲ್ಪ ಸಮಯದ ನಂತರ ಮೇಲೆ ಬಂದ ಪ್ರಜ್ವಲ್ ಮೊದಲು ಬಂದಿದ್ದ ಮಹಿಳೆಯರನ್ನು ಮಾತಾಡಿಸಿ ಕಳುಹಿಸಿದ್ದಾರೆ. ನಂತರ ನನ್ನನ್ನು ಕೋಣೆಯೊಳಗೆ ಕರೆದು, ಬಾಗಿಲು ಹಾಕಿ ಕೈ ಹಿಡಿದು ಎಳೆದು ಮೈಮೇಲೆ ಎಳೆದುಕೊಂಡರು. ಸಂತ್ರಸ್ತೆ ಕೂಗಿಕೊಳ್ಳುವುದಾಗಿ ಹೇಳಿದಾಗ, ಪ್ರಜ್ವಲ್ ಗನ್ ತೋರಿಸಿ ಬೆದರಿಕೆ ಹಾಕಿದ್ದಾರೆ. ಅಲ್ಲದೆ ನಿನ್ನ ಗಂಡನಿಂದ ನನ್ನ ತಾಯಿಯ ಎಂಎಲ್‌ಎ ಟಿಕೆಟ್ ತಪ್ಪಿದೆ. ಅವನು ಜಾಸ್ತಿ ಮಾತಾಡುತ್ತಾನೆ ಸುಮ್ಮನೆ ಇರಲು ಹೇಳು ಎಂದು ಬೆದರಿಸಿದರು. ಅಲ್ಲದೆ ನೀನು ರಾಜಕೀಯವಾಗಿ ಬೆಳೆಯ ಬೇಕಾದರೆ ನಾನು ಹೇಳಿದಂತೆ ಕೇಳು ಎಂದು ಹೇಳಿದರು.

ನಂತರ, ಅವರು ನನ್ನ ಬಟ್ಟೆಗಳನ್ನು ಬಿಚ್ಚಲು ನನ್ನನ್ನು ಕೇಳಿದರು ಮತ್ತು ನಾನು ಅದಕ್ಕೆ ನಿರಾಕರಿಸಿದೆ. ನಾನು ಸಹಾಯ ಕ್ಕಾಗಿ ಕಿರುಚುತ್ತೇನೆ ಎಂದು ಹೇಳಿದೆ. ನಂತರ ಪ್ರಜ್ವಲ್ ತಮ್ಮ ಬಂದೂಕು ಹಿಡಿದು ಕೊಂಡು ಬಂದು, ನನ್ನನ್ನು ಹಾಗೂ ನನ್ನ ಪತಿಯನ್ನು ಬಿಡುವುದಿಲ್ಲ ಎಂದು ಬೆದರಿಕೆ ಹಾಕಿದರು. ಬಳಿಕ ಬಲವಂತವಾಗಿ ನನ್ನ ಬಟ್ಟೆಗಳನ್ನು ಬಿಚ್ಚಿ ನನ್ನ ಮೇಲೆ ಅತ್ಯಾಚಾರ ಮಾಡಿದರು.

ಅಲ್ಲದೆ ತಮ್ಮ ಮೊಬೈಲ್‌ನಲ್ಲಿ ಅತ್ಯಾಚಾರದ ವಿಡಿಯೋ ರೆಕಾರ್ಡ್ ಮಾಡಿಕೊಂಡು ಯಾರಿಗಾದರೂ ತಿಳಿಸಿದರೆ ಇದನ್ನು ವೈರಲ್ ಮಾಡುವುದಾಗಿ ಬೆದರಿಕೆ ಹಾಕಿದರು. ಅದೇ ವಿಡಿಯೋಗಳನ್ನು ಇಟ್ಟುಕೊಂಡು ಫೋನ್ ಮೂಲಕ ವಿಡಿಯೋ ಕಾಲ್ ಮಾಡುತ್ತಿದ್ದರು. ಮತ್ತು ವಿಡಿಯೋ ಕಾಲ್‌ನಲ್ಲೇ ನನಗೆ ಬೆತ್ತಲಾಗುವಂತೆ ಒತ್ತಾಯಿಸುತ್ತಿದ್ದರು. ಹೀಗೆ ಅವರು ನನ್ನ ಮೇಲೆ ಹಲವಾರು ಬಾರಿ ಅತ್ಯಾಚಾರ ಎಸಗಿದ್ದಾರೆ ಎಂದು ಮಹಿಳೆ ದೂರಿನಲ್ಲಿ ಆರೋಪಿಸಿದ್ದಾರೆ. ತಾನು ಭಯದಿಂದ ಇದುವರೆಗೆ ದೂರು ನೀಡಿಲ್ಲ. ಆದರೆ ಪ್ರಜ್ವಲ್ ವಿರುದ್ಧದ ಆರೋಪಗಳ ಬಗ್ಗೆ ಪರಿಶೀಲಿಸಲು ಎಸ್‌ಐಟಿ ರಚಿಸಿರುವುದರಿಂದ ಈಗಲೇ ದೂರು ನೀಡುವುದು ಸೂಕ್ತ ಎಂದು ನಿರ್ಧರಿಸಿದೆ ಎಂದು ಮಹಿಳೆ ದೂರಿನಲ್ಲಿ ಹೇಳಿಕೊಂಡಿದ್ದಾರೆ.

ಹಲವು ಸೆಕ್ಷನ್‌ಗಳಲ್ಲಿ ಪ್ರಜ್ವಲ್ ರೇವಣ್ಣ ವಿರುದ್ಧ ಪ್ರಕರಣ ದಾಖಲು: ಮಹಿಳೆ ನೀಡಿದ ದೂರಿನ ಅನ್ವಯ ಪೊಲೀಸರು ಪ್ರಜ್ವಲ್ ರೇವಣ್ಣ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 376 (2) (ಎನ್) (ಒಂದೇ ಮಹಿಳೆಯ ಮೇಲೆ ಪದೇ ಪದೇ ಅತ್ಯಾಚಾರ ಎಸಗುವುದು), 354 (ಎ) (1) (ದೈಹಿಕ ಸಂಪರ್ಕ ಮತ್ತು ಅನಪೇಕ್ಷಿತ ಮತ್ತು ಸ್ಪಷ್ಟ ಲೈಂಗಿಕ ಪ್ರಚೋದನೆಗೆ ಒತ್ತಾಯ), 354 (ಬಿ) (ಎವಸ್ತ್ರಗೊಳಿಸುವ ಉದ್ದೇಶದಿಂದ ಮಹಿಳೆಗೆ ಕ್ರಿಮಿನಲ್ ಬಲದ ಆಕ್ರಮಣ ಅಥವಾ ಒತ್ತಾಯ) 354(c) (voyeurism–ಅಶ್ಲೀಲ ಚಿತ್ರ ರೆಕಾರ್ಡ್ ಮಾಡಿಕೊಳ್ಳುವುದು) ಮತ್ತು ಮಾಹಿತಿ ತಂತ್ರಜ್ಞಾನ ಕಾಯಿದೆಯ ಏಭಾಗ 66(e) (ಗೌಪ್ಯತೆ ಉಲ್ಲಂಘನೆ)ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿದು ಬಂದಿದೆ.

3 ವರ್ಷಗಳ ಡಿಪ್ಲೋಮಾಕೋರ್ಸಗೆ ಅರ್ಜಿಗಳ ಆಹ್ವಾನ

ಹಾಸನ: 2024–25 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ.(ಡಿ.ಹೆಚ್.ಟಿ.ಟಿ) ಕೋರ್ಸ್‌ಕಲಿಕೆಗಾಗಿ 44 ಪುರುಷಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲುಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/– ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವಆಧಾರದ ಮೇಲೆ ಕಲ್ಪಿಸಲಾಗುವುದು.

ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲಿಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಿನಾಂಕ:01.07.2024 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಡೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆಆಧಾರವಾಗಿರುತ್ತವೆ. ಡಿಪ್ಲೋಮಾ ಕೋರ್ಸಗಾಗಿ ಲಭ್ಯವಿರುವ ಸಂಸ್ಥೆಗಳ ವಿವರ: ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ (ಕರ್ನಾಟಕ)– 22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) –17 ಅಭ್ಯರ್ಥಿಗಳು, ಎಸ್.ಜಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ – 03 ಅಭ್ಯರ್ಥಿಗಳು ವೆಂಕಟಗಿರಿ (ನೆಲ್ಲೂರುಜಿಲ್ಲೆ, ಆಂಧ್ರಪ್ರದೇಶ), ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ)– 02 ಅಭ್ಯರ್ಥಿಗಳು, ಒಟ್ಟು44 ಅಭ್ಯರ್ಥಿಗಳು

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ ಪ್ರವೇಶಕುರಿತಂತೆಕೌನ್ಸಿಲಿಂಗ್‌ಗಾಗಿಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತುಅರ್ಜಿಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನದ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿದೂರವಾಣಿ ಸಂಖ್ಯೆ:08372–297221 ಮೊಬೈಲ್ ಸಂ.9449162822 ಅಥವಾಸಹಾಯಕ ನಿರ್ದೇಶಕರಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಡಿ.ಐ.ಸಿ ಬಿಲ್ಡಿಂಗ್, ಡೈರಿ ಸರ್ಕಲ್, ಹಾಸನ ಈ ಕಛೇರಿದೂರವಾಣಿ ಸಂಖ್ಯೆ:08172–240627 ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ಅರ್ಜಿಗಳನ್ನು ಆನ್‌ಲೈನ್‌ನಲ್ಲಿಡೌನಲೋಡ್ ಮಾಡಿಕೊಳ್ಳಲು ಲಿಂಕ್ https://khtigadag.ac.in/AdmissionForm.pdf ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ–582102"ಇವರಿಗೆ ಸಲ್ಲಿಸಲು ಕೊನೆಯದಿನಾಂಕ: 31.05.2024 ಆಗಿರುತ್ತದೆ.

ಗುಡುಗು–ಸಿಡಿಲಿನ ಅಪಾಯದಿಂದ ತಪ್ಪಿಸಿಕೊಳ್ಳಲು ತಹಸೀಲ್ದಾರ್ ಶಿವರಾಜ್ ಸಲಹೆ

ದೇವನಹಳ್ಳಿ : ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಗುಡುಗು ಮತ್ತು ಸಿಡಿಲು ಬಡಿತದಿಂದ ಉಂಟಾಗುವ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಸಲಹೆ/ಸೂಚನೆಗಳ ಆದೇಶ ಹೊರಡಿಸಿದೆ.

ಕರ್ನಾಟಕದ ಹಲವು ಭಾಗಗಳಲ್ಲಿ ಗುಡುಗು–ಸಿಡಿಲು ಸಾಮಾನ್ಯವಾಗಿ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನಲ್ಲಿ ಕಾಣಿಸಿಕೊಳ್ಳುತ್ತದೆ. ಸಿಡಿಲು ಸಾಮಾನ್ಯವಾಗಿ ಮಧ್ಯಾಹ್ನ ಅಥವಾ ಸಂಜೆ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಗುಡುಗು ಸಿಡಿಲಿನಿಂದಾಗುವ ಅಪಾಯಗಳನ್ನು ತಗ್ಗಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ತಹಶೀಲ್ದಾರ್ ಶಿವರಾಜ್ ತಿಳಿಸಿದರು.

ತಾಲೂಕು ಕಛೇರಿ ನ್ಯಾಯಾಂಗ ಸಭಾಂಗಣದಲ್ಲಿ ಕರೆಯಾಗಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಸಾರ್ವಜನಿಕರು ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಹಾಗೂ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದಿಂದ ಬರುವ ಸಂದೇಶಗಳನ್ನು ಗಮನಿಸುವುದು. ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು, ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗದಿರುವುದು. ಗುಡುಗು–ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ, ಸುರಕ್ಷಿತವಾದ ಕಟ್ಟಡಗಳಾದ ಮನೆಗಳು, ಕಛೇರಿಗಳು, ಅಂಗಡಿಗಳು ಮತ್ತು ಕಿಟಕಿ ಮುಚ್ಚಿರುವಂತಹ ವಾಹನಗಳಲ್ಲಿ ಆಶ್ರಯ ಪಡೆಯುವುದು ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ತಿಳಿರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿಕೊಂಡು ಆಶ್ರಯ ಪಡೆಯುವುದು. ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು, ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರುವುದು. ಸರಕಾರದ ಮಾರ್ಗಸೂಚಿಗಳನ್ನು ಪಾಲಿಸಿ.

ಸಿಡಿಲು / ಮಿಂಚು ಬಡಿದಾಗ ಪಾಲಿಸಬೇಕಾದ ಪ್ರಥಮ ಚಿಕಿತ್ಸಾ ವಿಧಾನ ಸಿಡಿಲು / ಮಿಂಚು ಬಡಿದ ಸಮಯದಲ್ಲಿ ಪ್ರಾಥಮಿಕವಾಗಿ 102/ 108 ಸಹಾಯವಾಣಿಗೆ ಕರೆ ಮಾಡಬೇಕು. ವೈದ್ಯಕೀಯ ಸಿಬ್ಬಂದಿಯು ಆಗಮಿಸುವ ಮುನ್ನವೇ ಈ ಕೆಳಕಂಡಂತೆ ನೀಡುವ ಅಗತ್ಯ ಪ್ರಥಮ ಚಿಕಿತ್ಸೆಯಿಂದ ಸಿಡಿಲು / ಮಿಂಚಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಜೀವವನ್ನು ಉಳಿಸಬಹುದಾಗಿದೆ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ದೇಹದಲ್ಲಿ ಯಾವುದೇ ವಿದ್ಯುತ್ ಕಣಗಳು ಸಂಚಾರವಾಗುವುದಿಲ್ಲ. ಆದ್ದರಿಂದ, ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ಮುಟ್ಟಿ ಉಪಚರಿಸುವ ವ್ಯಕ್ತಿಗೆ ಯಾವುದೇ ಅಪಾಯವಿರುವುದಿಲ್ಲ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಉಸಿರಾಟ ಹಾಗೂ ಎದೆ ಬಡಿತವನ್ನು ಪರೀಕ್ಷಿಸಬೇಕು. ವ್ಯಕ್ತಿಯ ದವಡೆಗೆ ನೇರವಾಗಿ ಕುತ್ತಿಗೆಯಲ್ಲಿರುವ ರಕ್ತನಾಳವನ್ನು ಪರೀಕ್ಷಿಸುವುದರಿಂದ ಸುಲಭವಾಗಿ ನಾಡಿ ಮಿಡಿತವನ್ನು ತಿಳಿಯಬಹುದು.

ವ್ಯಕ್ತಿಯಲ್ಲಿ ಉಸಿರಾಟವು ಕಂಡು ಬರದಿದ್ದಲ್ಲಿ ತಕ್ಷಣವೇ ಕೃತಕ ಉಸಿರಾಟ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ವ್ಯಕ್ತಿಯಲ್ಲಿ ಎದೆಬಡಿತವು ಕಂಡು ಬರದಿದ್ದಲ್ಲಿ ತಕ್ಷಣವೇ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ಸಿಡಿಲು ಬಡಿದಿರುವ ವ್ಯಕ್ತಿಯಿರುವ ಸ್ಥಳಕ್ಕೆ ತಲುಪ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–6 | 04–05–2024

ಬೆಂಗಳೂರು

ನೀರು, ಮೇವಿಲ್ಲದೆ ಎರಡು ಎಮ್ಮೆ, ಒಂದು ಹಸು ಸಾವು

ಚಾಮರಾಜನಗರ: ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇಂಡಿಗನತ್ತ ಗ್ರಾಮದಲ್ಲಿ ಮೇವು ಕುಡಿಯುವ ನೀರು ಇಲ್ಲದೆ ಎರಡು ಎಮ್ಮೆ ಒಂದು ಹಸು ಮೃತಪಟ್ಟಿರುವ ದಾರುಣ ಘಟನೆ ಜರುಗಿದೆ.

ಕಳೆದ ಏಪ್ರಿಲ್ 26ರಂದು ಇಂಡಿಗನತ್ತ ಗ್ರಾಮದಲ್ಲಿ ನಡೆದ ಮತಗಟ್ಟೆ ದ್ವಂಸ ಪ್ರಕರಣದಲ್ಲಿ ಇಂಡಿಗನತ್ತ ಗ್ರಾಮದ 200ಕ್ಕೂ ಹೆಚ್ಚು ಗ್ರಾಮಸ್ಥರ ಮೇಲೆ ಮಲೆ ಮಾದೇಶ್ವರ ಬೆಟ್ಟ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಮೂರು ಪ್ರಕರಣಗಳು ದಾಖಲಾಗಿದೆ. ಈಗಾಗಲೇ 40ಕ್ಕೂ ಹೆಚ್ಚು ಆರೋಪಿಗಳನ್ನು ವಶಕ್ಕೆ ಪಡೆದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಮಲೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುವುದರಿಂದ ಗ್ರಾಮಸ್ಥರು ತಲೆಮರೆಸಿಕೊಂಡಿರುವುದರಿಂದ ಜಾನುವಾರುಗಳಿಗೆ ಸಮರ್ಪಕವಾಗಿ ಮೇವು, ಕುಡಿಯುವ ನೀರು ಸಿಗದೇ ಇರುವುದರಿಂದ ಇಂಡಿಗನತ್ತ ಗ್ರಾಮದ ಪುಟ್ಟ ತಂಬಡಿ, ಮುರುಗೇಶ್ ತಂಬಡಿ ಎಂಬುವರಿಗೆ ಸೇರಿದ ಎರಡು ಎಮ್ಮೆ, ಹಸು ಸ್ಥಳದಲ್ಲಿಯೇ ಮೃತಪಟ್ಟಿದೆ.

ಮತಗಟ್ಟೆ ದ್ವಂಸ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂಡಿಗನತ್ತ ಗ್ರಾಮಸ್ಥರ ಮೇಲೆ ಪ್ರಕರಣ ದಾಖಲಾಗಿರುವುದರಿಂದ ಬಂಧನ ಭೀತಿಯಿಂದ ಗ್ರಾಮಸ್ಥರು ತಲೆಮರಿಸಿಕೊಂಡಿದ್ದಾರೆ. ಈ ಸಂಬಂಧ ಗ್ರಾಮದಲ್ಲಿರುವ ಹಸು ಹಾಗೂ ಎಮ್ಮೆಗಳನ್ನು ಜಿಲ್ಲಾಡಳಿತವೇ ಸಂರಕ್ಷಿಸುವಂತೆ ಪ್ರಾಣಿ ಪ್ರಿಯರು ಒತ್ತಾಯಿಸಿದ್ದಾರೆ.



ಬೆಂಗಳೂರು ಪದವೀಧರರ ಕ್ಷೇತ್ರ ಚುನಾವಣೆಗೆ ದಿನಾಂಕ ಘೋಷಣೆ: ಜೂ.3ಕ್ಕೆ ಮತದಾನ

ಬೆಂಗಳೂರು: ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಪದವೀಧರರ ಕ್ಷೇತ್ರದ ಚುನಾವಣೆಗೆ ಜೂ. 03 ರಂದು ಮತದಾನ ನಡೆಯಲಿದ್ದು, ಅರ್ಹ ಪದವೀಧರರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಲು ಮೇ. 06 ರವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎನ್.ಶಿವಶಂಕರ ಅವರು ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗವು, ಬೆಂಗಳೂರು ಪದವೀಧರರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಿದ್ದು, ದಿನಾಂಕ: 09 ಮೇ. 2024 (ಗುರುವಾರ) ಅಧಿಸೂಚನೆ ಹೊರಡಿಸಲಾಗುತ್ತದೆ. ನಾಮಪತ್ರ ಸಲ್ಲಿಸಲು ಕೊನೆಯ ದಿನ 16 ಮೇ. 2024 (ಗುರುವಾರ), ನಾಮ ಪತ್ರಗಳ ಪರಿಶೀಲನೆ ದಿನಾಂಕ– 17 ಮೇ. 2024 (ಶುಕ್ರವಾರ), ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನಾಂಕ – 20 ಮೇ. 2024 (ಸೋಮವಾರ), ಮತದಾನದ ದಿನಾಂಕ –03 ಜೂನ್. 2024 (ಸೋಮವಾರ), ಮತದಾನದ ಸಮಯ– ಬೆಳಿಗ್ಗೆ 8:00 ರಿಂದ ಸಂಜೆ 4:00 ಗಂಟೆ, ಮತ ಎಣಿಕೆ ದಿನಾಂಕ– ಜೂನ್ 06. 2024 (ಗುರುವಾರ), ಚುನಾವಣಾ ಪ್ರಕ್ರಿಯೆ ಕೊನೆಗೊಳ್ಳುವ ದಿನಾಂಕ– ಜೂನ್12. 2024 (ಬುಧವಾರ). ಮತದಾನದ ಸಮಯ ಬೆಳಿಗ್ಗೆ 8.00 ರಿಂದ ಸಂಜೆ 4.00 ಗಂಟೆಯವರೆಗೆ ನಡೆಯಲಿದೆ. ಚುನಾವಣೆಯ ಮಾದರಿ ನೀತಿ ಸಂಹಿತೆಯು ಮೇ 02 ರಿಂದಲೇ ಚುನಾವಣೆ ನಡೆಯುವ ಕ್ಷೇತ್ರ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

ಪದವೀಧರರ ಕ್ಷೇತ್ರದ ಅಂತಿಮ ಮತದಾರ ಪಟ್ಟಿಯಂತೆ 9378 ಪುರುಷ ಪದವೀಧರರು ಹಾಗೂ 8270 ಮಹಿಳಾ ಪದವೀಧರರು ಸೇರಿ ಒಟ್ಟು 17648 ಪದವೀಧರ ಮತದಾರರು ಪಟ್ಟಿಯಲ್ಲಿ ನೊಂದಾಯಿಸಿಕೊಂಡಿದ್ದಾರೆ.

ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿ: ಮತದಾರರ ನಿರಂತರ ನೋಂದಣಿ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ. ಈಗಾಗಲೇ 30.12.2023 ರಂದು ಅಂತಿಮ ಮತದಾರರ 'ಪಟ್ಟಿಯನ್ನು ಪ್ರಜೂರ ಪಡಿಸಲಾಗಿರುತ್ತದೆ. ಮುಂದುವರೆಸುತ್ತಾ ಹೊಸದಾಗಿ ನೋಂದಾಯಿಸಬೇಕಾದ ಮತದಾರರಿಗೆ ದಿನಾಂಕ: 06.05.2024ರ ಸಂಜೆ 5.30 ರವರೆಗೆ ನೋಂದಣಿಗಾಗಿ ಅರ್ಜಿಯನ್ನು ಸ್ವೀಕರಿಸುವ ಪ್ರಕ್ರಿಯೆ ನಿರಂತರವಾಗಿ ಜಾರಿಯಲ್ಲಿರುತ್ತದೆ. ಕಾರಣ ಅರ್ಹರಿರುವ ಮತದಾರರು ನಿಗದಿ ಪಡಿಸಿದ ಕಾಲ ಮಿತಿಯೊಳಗೆ ನೋಂದಣಿ ಪ್ರಕ್ರಿಯೆಗಾಗಿ ತಮ್ಮ ಅರ್ಜಿಯನ್ನು ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಮತದಾನ ಹಕ್ಕನ್ನು ಚಲಾಯಿಸಿ ಸುಭದ್ರವಾದ ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಕಲ್ಪಿಸುವಲ್ಲಿ ಸೂಕ್ತ ಪಾತ್ರವಹಿಸಲು ಸಾರ್ವಜನಿಕರಲ್ಲಿ ವಿನಂತಿಸಲಾಗಿದೆ.

ಚುನಾವಣಾ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಬಗ್ಗೆ ಹಾಗೂ ಚುನಾವಣೆಗೆ ಸಂಬಂಧಿಸಿದಂತೆ ಇತರೆ ವಿಷಯಗಳ ಬಗ್ಗೆ ಸಾರ್ವಜನಿಕರಿಂದ ಸ್ವೀಕರಿಸುವ ದೂರು / ಅಹವಾಲುಗಳನ್ನು ನಿವಾರಿಸುವ ಸಲುವಾಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಕಛೇರಿ ಹಾಗೂ ಜಿಲ್ಲೆಯ ಉಪವಿಭಾಗಾಧಿಕಾರಿಗಳ ಕಛೇರಿ & ತಹಸೀಲ್ದಾರ್ ಕಛೇರಿಗಳಲ್ಲಿ ದೂರು ನಿವಾರಣಾ ಕೇಂದ್ರಗಳನ್ನು ಸ್ಥಾಪಿಸ ಲಾಗಿದ್ದು, ಈ ಕೆಳಕಾಣಿಸಿದ ಸಹಾಯವಾಣಿ ಸಂಖ್ಯೆಗಳನ್ನು ನಿಗದಿಪಡಿಸಲಾಗಿದೆ:

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರವರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಸಹಾಯವಾಣಿ ಸಂಖ್ಯೆ 080–29902025, ಉಪವಿಭಾಗಾಧಿಕಾರಿ ರವರ ಕಛೇರಿ (ದೊಡ್ಡಬಳ್ಳಾಪುರ ಉಪವಿಭಾಗ) ಸಹಾಯವಾಣಿ ಸಂಖ್ಯೆ. 080–27622037, ತಹಶೀಲ್ದಾರ್ ಕಛೇರಿ(ಹೊಸಕೋಟೆ ವಿಧಾನ ಸಭಾ ಕ್ಷೇತ್ರ) ಸಹಾಯವಾಣಿ ಸಂಖ್ಯೆ. 080–27931237, ತಹಶೀಲ್ದಾರ್ ಕಛೇರಿ (ದೇವನಹಳ್ಳಿ ವಿಧಾನಸಭಾ ಕ್ಷೇತ್ರ) ಸಹಾಯವಾಣಿ ಸಂಖ್ಯೆ. 080–22122999, ತಹಶೀಲ್ದಾರ್ ಕಛೇರಿ (ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರ) ಸಹಾಯವಾಣಿ ಸಂಖ್ಯೆ. 080–27622002, ತಹಶೀಲ್ದಾರ್ ಕಛೇರಿ (ನೆಲಮಂಗಲ ವಿಧಾನಸಭಾ ಕ್ಷೇತ್ರ) ಸಹಾಯವಾಣಿ ಸಂಖ್ಯೆ. 080–27722126 ಮೇಲಿನ ಸಹಾಯವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಪರಿಹಾರವನ್ನು ಪಡೆದುಕೊಳ್ಳಬಹುದಾಗಿದೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯು ಒಂದು ಅತ್ಯಂತ ಮಹತ್ವಪೂರ್ಣ ಹಾಗೂ ಪವಿತ್ರ ಕಾರ್ಯವಾಗಿರುತ್ತದೆ. ಕಾರಣ ಈ ಚುನಾವಣೆಯನ್ನು ಮುಕ್ತ ನ್ಯಾಯಸಮ್ಮತ ಹಾಗೂ ನಿಷ್ಪಕ್ಷಪಾತವಾಗಿ ಜರುಗುವಲ್ಲಿ ಪ್ರತಿಯೊಬ್ಬ ಮತದಾರರು ಹಾಗೂ ಎಲ್ಲಾ ರಾಜಕೀಯ ಪಕ್ಷದವರು ಹಾಗೂ ವರ್ಗದವರು ಸಕಾರಾತ್ಮಕವಾಗಿ ಕಾರ್ಯನಿರ್ವಹಿಸಿ ದೋಷರಹಿತ ವಾಗಿರುವಂತಹ ಚುನಾವಣೆಯನ್ನು ಯಶಸ್ವಿಯಾಗಿ ನಿರ್ವಹಿಸುವಲ್ಲಿ ಎಲ್ಲರು ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಅವಕ್ಕನುಗುಣವಾಗಿ ಕಾರ್ಯನಿರ್ವಹಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಹಾಗೂ ಬೆಂಗಳೂರು ಪದವೀಧರರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಡಾ. ಎನ್. ಶಿವಶಂಕರ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಸಂಗಪ್ಪ ಉಪಸ್ಥಿತರಿದ್ದರು.

ಮೇ 6ರವರೆಗೆ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳಲು ಪದವೀಧರರಿಗೆ ಅವಕಾಶ: ಜಿಲ್ಲಾಧಿಕಾರಿ ಡಾ.ಎನ್.ಶಿವಶಂಕರ್



ಆಯುಷ್ ಇಲಾಖೆಯಿಂದ ಆರೋಗ್ಯಕರ ಆಯುಷ್ ಪಾನಕ ಪರಿಚಯ

ಬೆಂಗಳೂರು: ಆಯುಷ್ ಇಲಾಖೆಯಿಂದ ಆರೋಗ್ಯಕರ ಆಯುಷ್ ಚಿಂಚಾ ಪಾನಕ (ಹುಣಸೆ ಹಣ್ಣಿನ ಪಾನಕ) ವನ್ನು ಪರಿಚಯಿಸಿದೆ.

ಆಯುಷ್ ಚಿಂಚಾ ಪಾನಕ ತಯಾರಿಸುವ ವಿಧಾನ ಹುಣಸೆ ಹಣ್ಣು 100 ಗ್ರಾಂ, ಬೆಲ್ಲದ ಪುಡಿ 400 ಮಿಲಿ, ಜೀರಿಗೆ ಪುಡಿ 10 ಗ್ರಾಂ, ಕಾಳು ಮೆಣಸು ಪುಡಿ 5 ಗ್ರಾಂ, ಸೈಂದವ ಲವಣ 5 ಗ್ರಾಂ ಒಳಗೊಂಡಿರಬೇಕು.

ಹುಣಸೆ ಹಣ್ಣನ್ನು ಅಗತ್ಯ ಪ್ರಮಾಣದ ನೀರಿನಲ್ಲಿ ಇಡೀ ರಾತ್ರಿ ನೆನಸಿಡಬೇಕು. ಮರುದಿನ ಬೆಳಿಗ್ಗೆ ಅದನ್ನು ಶುದ್ಧವಾದ ಕೈಗಳಿಂದ ಚೆನ್ನಾಗಿ ಹಿಸುಕಿ ಸೋಸಿಕೊಳ್ಳಬೇಕು. (ಗಾಢವಾದ ಹುಣಸೆ ಮಿಶ್ರಣ ಬಾಟಲಿಗಳಲ್ಲಿ ತುಂಬಿಸಿಕೊಂಡು ಪಾನಕ ತಯಾರಿಸುವಾಗ ಬೇಕಾದಷ್ಟು ಬಳಸಿ), ಅಗತ್ಯ ಪ್ರಮಾಣದಷ್ಟು ನೀರನ್ನು ಪಾತ್ರೆಗೆ ಹಾಕಿಕೊಳ್ಳಬೇಕು. ಅಗತ್ಯ ಪ್ರಮಾಣದಷ್ಟು ಹುಣಸೆ ಹಣ್ಣಿನ ಮಿಶ್ರಣವನ್ನು ನೀರಿನ ಪಾತ್ರೆಗೆ ಹಾಕಬೇಕು. ನಿರ್ದಿಷ್ಟ ಪ್ರಮಾಣದ ಬೆಲ್ಲದ ಪುಡಿಯನ್ನು ನೀರಿನಲ್ಲಿ ಹಾಕಿ ಚೆನ್ನಾಗಿ ಕರಗಿಸಬೇಕು. ಕೊನೆಯಲ್ಲಿ ನಿರ್ದಿಷ್ಟ ಪ್ರಮಾಣದಲ್ಲಿ ಜೀರಿಗೆ ಪುಡಿ, ಕಾಳುಮೆಣಸಿನ ಪುಡಿ, ಸೈಂದವ ಲವಣವನ್ನು ಸೇರಿಸಬೇಕು. 50 ರಿಂದ 100 ಮಿಲಿ ಮಾತ್ರ ಸೇವನೆ ಮಾಡಬೇಕು. ಅಗತ್ಯವಿದ್ದಲ್ಲಿ ನೀರು ಸೇರಿಸಿಕೊಳ್ಳಬೇಕು.

ಆಯುಷ್ ಚಿಂಚಾ ಪಾನಕದ ಉಪಯೋಗ: ಜೀರ್ಣಕ್ರಿಯೆ ಉತ್ತಮಗೊಳಿಸುತ್ತದೆ. ಮಲಬದ್ಧತೆ ನಿವಾರಿಸುವುದು. ಶರೀರದ ದಾಹ ಹಾಗೂ ಬಾಯಾರಿಕೆಯನ್ನು ನೀಗಿಸುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ಆಯುಷ್ ಆಸ್ಪತ್ರೆ / ಚಿಕಿತ್ಸಾಲಯಕ್ಕೆ ಭೇಟಿ ನೀಡಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಪದವೀಧರ ಕ್ಷೇತ್ರ ಹಾಗೂ ಶಿಕ್ಷಕರ ಕ್ಷೇತ್ರಕ್ಕೆ ಮತದಾರ ಪಟ್ಟಿಗೆ ಹೆಸರು ಸೇರ್ಪಡೆಗೆ ಅವಕಾಶ

ಬೆಂಗಳೂರು: ಭಾರತ ಚುನಾವಣಾ ಆಯೋಗವು, ಬೆಂಗಳೂರು ಪದವೀಧರರ ಕ್ಷೇತ್ರ ಮತ್ತು ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆ–2024ರ ಸಂಬಂಧ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಅದರಂತೆ ಮೇ 2 ರಿಂದಲೇ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದ್ದು, ಜೂನ್ 3 ರಂದು ಮತದಾನ ಹಾಗೂ ಜೂನ್ 6 ರಂದು ಮತ ಎಣಿಕೆ ನಡೆಯಲಿದೆ.

ಅರ್ಹ ಮತದಾರರು ಮತದಾರರ ಪಟ್ಟಿಗೆ ತಮ್ಮ ಹೆಸರುಗಳನ್ನು ಸೇರ್ಪಡೆಗೊಳಿಸಲು ಮೇ 6 ಸಂಜೆ 5–30 ಗಂಟೆಯವರೆಗೆ ಕಾಲಾವಕಾಶವಿದ್ದು, ಬೆಂಗಳೂರು ಪದವೀಧರರ ಕ್ಷೇತ್ರದ ವ್ಯಾಪ್ತಿಯ ಬೆಂಗಳೂರು ನಗರ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳ ಅರ್ಹ ಪದವೀಧರರು ನಮೂನೆ–18ರಲ್ಲಿ ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ವ್ಯಾಪ್ತಿಯ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ (ಹರಿಹರ, ದಾವಣಗೆರೆ ಮತ್ತು ಜಗಳೂರು ತಾಲ್ಲೂಕುಗಳು ಮಾತ್ರ) ಜಿಲ್ಲೆಗಳ ವ್ಯಾಪ್ತಿಯ ಅರ್ಹ ಶಿಕ್ಷಕರು ನಮೂನೆ–19ರಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ ಎಂದು ಬೆಂಗಳೂರು ವಿಭಾಗದ ಚುನಾವಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂತರ ರಾಷ್ಟ್ರೀಯ ಚಿರತೆ ದಿನಾಚರಣೆ

ಟಿ.ನರಸೀಪುರ: ಟಿ.ನರಸೀಪುರ ವಲಯದ ಉಕ್ಕಲಕೆರೆ ಮಲ್ಲಿಕಾರ್ಜುನ ಸ್ವಾಮಿ ಬೆಟ್ಟದ ತಪ್ಪಲಿನಲ್ಲಿ "ಅಂತರ ರಾಷ್ಟ್ರೀಯ ಚಿರತೆ ದಿನಾಚರಣೆ" ಅಂಗವಾಗಿ ಜನಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮೈಸೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಡಾ.ಬಸವರಾಜ ಕೆ.ಎನ್. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಾದ ಲಕ್ಷ್ಮೀಕಾಂತ ಎನ್. ಮತ್ತು ಸಂಪನ್ಮೂಲ ವ್ಯಕ್ತಿಗಳಾದ ನಂಜರಾಜ ಅರಸ್ ರವರು ಭಾಗವಹಿಸಿ "ವಿಶ್ವ ಚಿರತೆ ದಿನಾಚರಣೆ"ಯ ಮಹತ್ವವನ್ನು ಉಕ್ಕಲಗೆರೆ, ಕಲ್ಲೀಪುರ, ಬೇತುಪುರ ಮುಂತಾದ ಗ್ರಾಮಗಳಿಂದ ಆಗಮಿಸಿದ್ದ ಸಾರ್ವಜನಿಕರಿಗೆ ತಿಳಿಸಲಾಯಿತು.

ಚಿರತೆ ಕಾರ್ಯಪಡೆ ಸಿಬ್ಬಂದಿಗಳು ಅತ್ತಳ್ಳಿ, ಬೆಟ್ಟಪಳ್ಳಿ, ಸೇನಾಪತಿ ಹಳ್ಳಿ, ಕಳ್ಳೇಪುರ, ಉಕ್ಕಲಗೆರೆ, ಬೇತುಪುರ ಮತ್ತು ಎಮ್.ಎಲ್ ಹುಂಡಿ ಗ್ರಾಮಗಳಿಗೆ ತೆರಳಿ ಚಿರತೆ–ಮಾನವ ಸಂಘರ್ಷ ನಿಯಂತ್ರಣದ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿ ಕರಪತ್ರ ಹಂಚಿ ಅರಿವು ಮೂಡಿಸಿದರು. ಶಾಲಾ ಮಕ್ಕಳಿಗೆ ರಸಪ್ರಶ್ನೆ ಹಾಗೂ ಚಿತ್ರಕಲಾ ಸ್ಪರ್ಧೆ ಏರ್ಪಡಿಸಿ, ವಿಜೇತರಿಗೆ ಬಹುಮಾನ ವಿತರಣೆ ಮಾಡಲಾಯಿತು.

6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ರಾಮನಗರ: ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿನಲ್ಲಿ ರಾಮನಗರ ಜಿಲ್ಲೆಯ ಆಯ್ಕೆ/ ಅನುಮೋದಿತ ಪ್ರಶಿಷ್ಟತೆ ಶಾಲೆಗಳಿಗೆ 6ನೇ ತರಗತಿಗೆ ಸೇರ ಬಯಸುವ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮೇ 21 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ. 9480849043, ಸಹಾಯಕ ನಿರ್ದೇಶಕರು ಗ್ರೇಡ್–1 ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರಾಮನಗರ ತಾಲ್ಲೂಕು. 9740349381, ಸಹಾಯಕ ನಿರ್ದೇಶಕರ ಗ್ರೇಡ್–1 ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಕನಕಪುರ ತಾಲ್ಲೂಕು. 9880435845ಸಹಾಯಕ ನಿರ್ದೇಶಕರು ಗ್ರೇಡ್–2 ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಚನ್ನಪಟ್ಟಣ ತಾಲ್ಲೂಕು. 9448857432ಸಹಾಯಕ ನಿರ್ದೇಶಕರು ಗ್ರೇಡ್–2 ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಮಾಗಡಿ ತಾಲ್ಲೂಕು. 9886891474 ಅನ್ನು ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಟೆಕ್ನಾಲಜೀಸ್ ಕಂಪನಿಯಿಂದ ಸ್ವದೇಶಿ ಬಾಂಬರ್ ಯುಎವಿ ಅನಾವರಣ

ಬೆಂಗಳೂರು: ಭಾರತದ ರಕ್ಷಣೆ ಮತ್ತು ಏರೋಸ್ಪೇಸ್ ತಂತ್ರಜ್ಞಾನ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಫ್ಲೈಯಿಂಗ್ ವೆಡ್ಜ್ ಕಂಪನಿಯು ದೇಶದ ಮೊದಲ ಸ್ವದೇಶಿ ಮಾನವರಹಿತ ಬಾಂಬರ್ ಡ್ರೋನ್ ಎಂಬ ಖ್ಯಾತಿಯು ಎಫ್‌ಡಬ್ಲ್ಯುಡಿ–200ಬಿ ಏರ್‌ಕ್ರಾಫ್ಟ್ ಅನ್ನು ಇಂದು ಹೆಮ್ಮೆಯಿಂದ ಅನಾವರಣಗೊಳಿಸಿತು.

ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಪ್ರತಿಷ್ಠಿತ ಸಂಶೋಧನಾ ಮೇಗನ್ನ ವೈಟ್ ಫೆದರ್‌ನಲ್ಲಿ ಸಮಾರಂಭ ಜರುಗಿತು.

ಮೇಕ್ ಇನ್ ಇಂಡಿಯಾ ಯೋಜನೆಗೆ ಬಲ ತುಂಬುವ ಹಾಗೂ ದುಬಾರಿ ಮಾನವರಹಿತ ಬಾಂಬರ್ ವಿಮಾನಗಳಿಗಾಗಿ ಭಾರತವು ವಿದೇಶಗಳ ಮೇಲೆ ಅವಲಂಬಿತವಾಗುವುದನ್ನು ಕಡಿಮೆ ಮಾಡುವ ಬದ್ಧತೆಯೊಂದಿಗೆ ಕಂಪನಿಯು ಭಾರತವನ್ನು ಜಾಗತಿಕ ಮಟ್ಟದ ಡ್ರೋನ್ ಉತ್ಪಾದನೆ ಹಾಗೂ ತಂತ್ರಜ್ಞಾನದ ಹಬ್ ಮಾಡುವ ಉದ್ದೇಶದಿಂದ ಕೆಲಸ ಮಾಡುತ್ತಿದೆ. ಇದೇ ವೇಳೆ ದೇಶಕ್ಕೆ ಸೂಕ್ತವಾದ ವಾಯು ರಕ್ಷಣಾ ಸಂಪನ್ಮೂಲಗಳನ್ನು ಒದಗಿಸುವ ಹಾಗೂ ರಾಷ್ಟ್ರೀಯ ಭದ್ರತೆಗೆ ಬಲ ತುಂಬುವ ಮೇಕೋನ್ನತ ಗುರಿಯನ್ನೂ ಹೊಂದಿದೆ.

ಸವಾರಂಭದಲ್ಲಿ ಮಾತನಾಡಿದ ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಕಂಪನಿಯ ಸಂಸ್ಥಾಪಕ ಶ್ರೀ ಸುಹಾಸ್ ತೇಜಸ್ಕಂದ, 'ಕಳೆದ 15 ವರ್ಷಗಳಿಂದ ಮಾನರಹಿತ ಬಾಂಬರ್



ಏರ್‌ಕ್ರಾಫ್ಟ್‌ಗಳನ್ನು ಹೊಂದುವ ಭಾರತದ ಕನಸು ಕನಸಾಗಿಯೇ ಉಳಿದಿತ್ತು. ಡಿಆರ್‌ಡಿಒದಲ್ಲಿ ಸಾಕಷ್ಟು ಬಂಡವಾಳ ಹೂಡಿ, ಸತತ ಪ್ರ